MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 275 | ಭಾನುವಾರ : 17-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 275 | SUNDAY : 17-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಅಗ್ನಿ ಅವಘಡ ಐವರು ಸಜೀವ ದಹನ

**ಬೆಂಗಳೂರು,ಆ.16–** ಪ್ಲಾಸ್ಟಿಕ್ ಮ್ಯಾಟ್ ಅಂಗಡಿಯಲ್ಲಿ ಅಗ್ನಿ ಅವಘಡ ಸಂಭವಿಸಿ ಇಬ್ಬರು ಮಕ್ಕಳು ಸೇರಿ ಒಂದೇ ಕುಟುಂಬದ ನಾಲ್ವರು ಸೇರಿ ಐವರು ಸಜೀವ ದಹನಗೊಂಡಿರುವ ಹೃದಯ ವಿದ್ರಾವಕ ಘಟನೆ ಹಲಸೂರು ಗೇಟ್ ನ ನಗರ್ತ ಪೇಟೆಯಲ್ಲಿ ಶನಿವಾರ ಮುಂಜಾನೆ ನಡೆದಿದೆ.

ದುರ್ಘಟನೆಯಲ್ಲಿ ಮದನ್ (38), ಪತ್ನಿ ಸಂಗೀತಾ (33) ಮಿತೇಶ್ (8), ವಿಹಾನ್ (5) ಸಜೀವ ದಹನಗೊಂಡ ಒಂದೇ ಕುಟುಂಬದವರಾಗಿದ್ದು, ಮತ್ತೊಂದು ಮಹಡಿಯಲ್ಲಿದ್ದ ಸುರೇಶ್ ಎಂಬವರೂ ಸುಟ್ಟು ಕರಕಲಾಗಿದ್ದಾರೆ.

ನಗರ್ತಪೇಟೆಯ ಪ್ಲಾಸ್ಟಿಕ್ ಮ್ಯಾಟ್ ಅಂಗಡಿಯಲ್ಲಿ ಮುಂಜಾನೆ 3.30ರ ಸುಮಾರಿಗೆ ಶಾರ್ಟ್ ಸರ್ಕ್ಯೂಟ್‌ನಿಂದ ಅಂಗಡಿಯಲ್ಲಿ ಬೆಂಕಿ ಹೊತ್ತಿಕೊಂಡು ಈ ದುರ್ಘಟನೆ ಸಂಭವಿಸಿದೆ.



ಸಂದೀಪ್ ಮತ್ತು ಬಾಲಕೃಷ್ಣ ಎಂಬುವವರ ಒಡೆತನದ ಒಟ್ಟು ನಾಲ್ಕು ಅಂತಸ್ತಿನ ಕಟ್ಟಡದಲ್ಲಿ ಅಗ್ನಿ ಅವಘಡ ಸಂಭವಿಸಿದ್ದು, ನೆಲಮಹಡಿ ಸೇರಿ ಎರಡು ಮಹಡಿಯಲ್ಲಿ ಗೋಡೌನ್ ಇದೆ. ಮೊದಲ ಮಹಡಿಯಲ್ಲಿ ಮಲಗಿದ್ದ ಕಾರ್ಮಿಕ ಸುರೇಶ್ ಸಜೀವ ದಹನಗೊಂಡಿದ್ದಾರೆ.(2ನೇಪುಟಕ್ಕೆ)

## ರಾಯಚೂರು ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ವರ್ಷದಲ್ಲಿ 1203 ಹೆರಿಗೆ ನಿರ್ವಹಿಸಿದ ಸಾಧನೆ

ಯುವ ಮಾರ್ಗ ಸುದ್ದಿ

**ರಾಯಚೂರು,ಆ.16–** ನಗರದ ತಾಯಿ ಮಕ್ಕಳ ಆಸ್ಪತ್ರೆಯು ಒಂದು ವರ್ಷದಲ್ಲಿ 1203 ಹೆರಿಗೆಯನ್ನು ನಿರ್ವಹಿಸಿದ ಕೀರ್ತಿಗೆ ಪಾತ್ರವಾಗಿದೆ.

2024ರ ಆಗಸ್ಟ್ 15 ರಂದು ರಾಯಚೂರ ನಗರದಲ್ಲಿ ಆರಂಭವಾದ ಈ ತಾಯಿ ಮಕ್ಕಳ ಆಸ್ಪತ್ರೆಯು ಸುಸಜ್ಜಿತ ಹೆರಿಗೆ ಕೊಠಡಿ, ಅತ್ಯಾಧುನಿಕ ಉಪಕರಣಗಳು, ನುರಿತ ವೈದ್ಯರನ್ನು ಹೊಂದುವ ಮೂಲಕ ಕರ್ನಾಟಕ ಸರಕಾರದ ಆಶಯದಂತೆ ಕಡು ಬಡವರಿಗೆ ಗುಣಮಟ್ಟದ ಆರೋಗ್ಯ ಸೇವೆ ನೀಡುತ್ತಿದ್ದು ಇಲ್ಲಿ 681 ಸಹಜ ಹೆರಿಗೆಗಳು ಮತ್ತು ಶಸ್ತ್ರಚಿಕಿತ್ಸೆ ಮೂಲಕ 522 ಹೆರಿಗೆಗಳು ಸೇರಿ ಒಟ್ಟು 1203 ಹೆರಿಗೆಗಳನ್ನು ನಿರ್ವಹಿಸಲಾಗಿದೆ.




**225 ಗಂಡಾಂತರ ಗರ್ಭಿಣಿಯರ ಹೆರಿಗೆ:** ಹೆರಿಗೆ ಸಮಯದಲ್ಲಿ ತಾಯಿಯ ಜೀವಕ್ಕೆ ಅಪಾಯಕಾರಿಯಾಗುವ ಗಂಡಾಂತರ ಗರ್ಭಿಣಿ ಎಂದು ಹೇಳಲಾಗುವ ಚೊಚ್ಚಲು ಗರ್ಭಿಣಿ, 145 ಸೇಂಟಿ ಮೀಟರ್‌ಗಿಂತ ಕಡಿಮೆ ಎತ್ತರ, ಅಧಿಕ ರಕ್ತದೊತ್ತಡ, ಅವಳಿ ಜವಳಿ ಗರ್ಭಿಣಿ, ವಿವಾಹವಾಗಿ ಐದಕ್ಕಿಂತ ಹೆಚ್ಚು ವರ್ಷಗಳ ನಂತರ ಗರ್ಭಿಣಿಯಾಗಿರುವ, ಮೊದಲ ಹೆರಿಗೆ ಸಿಸೇರಿಯನ್ ಆಗಿರುವ ಮುಂತಾದ ಕಾರಣಗಳ ಹೆರಿಗೆ ಅಪಾಯಕಾರಿಯಾಗಿರುವ 225 ಗರ್ಭಿಣಿಯರ ಹೆರಿಗೆ ಮಾಡಲಾಗಿದೆ.

ಈ ಆಸ್ಪತ್ರೆಯು ಆರಂಭವಾಗಿ ವರ್ಷದಲ್ಲಿ ದೋಅಬ್ ನಾಡು ರಾಯಚೂರು ಜಿಲ್ಲೆಯ ಜನತೆಗೆ ಗುಣಮಟ್ಟದ ಆರೋಗ್ಯ ಸೇವೆ ನೀಡುವ ಜೊತೆಗೆ ತಾಯಿ ಮರಣ, ಶಿಶು ಮರಣ ತಡೆಗೆ ತನ್ನದೆ ಕೊಡುಗೆ ನೀಡುತ್ತಿರುವ ತಾಯಿ ಮಕ್ಕಳ ಆಸ್ಪತ್ರೆಯ ಸೇವೆಯನ್ನು ಸಾರ್ವಜನಿಕರು ಪಡೆಯಬೇಕು. ನಮಗೆ ಪ್ರತಿ ಹಂತದಲ್ಲೂ 2ನೇ ಪುಟಕ್ಕೆ

## ಶ್ರೀ ಕೃಷ್ಣನ ಆದರ್ಶಗಳನ್ನು ಪಾಲನೆ ಮಾಡೋಣ: ಸಂಸದ ಜಿ.ಕುಮಾರ ನಾಯಕ




ಯುವ ಮಾರ್ಗ ಸುದ್ದಿ

**ರಾಯಚೂರು,ಆ.16–** ಶ್ರೀಕೃಷ್ಣನ ಪ್ರಬುದ್ಧತೆ, ಮುತ್ಸದ್ಧಿತನವು ಇಂದಿನ ಕಾಲಘಟ್ಟಕ್ಕೂ ಮಾದರಿಯಾಗಿದ್ದು, ನಮ್ಮೆಲ್ಲರನ್ನು ರಕ್ಷಿಸುವ ಶ್ರೀ ಕೃಷ್ಣನು ತಿಳಿಸಿದ ಆದರ್ಶ ಜೀವನ ಮೌಲ್ಯಗಳನ್ನು ನಾವೆಲ್ಲರು ಪಾಲನೆ ಮಾಡೋಣ ಎಂದು ಸಂಸದರಾದ ಜಿ.ಕುಮಾರ ನಾಯಕ ಅವರು ಸಲಹೆ ನೀಡಿದರು.

ಆಗಸ್ಟ್ 16ರ ಶನಿವಾರ ದಂದು ನಗರದ ಯಾದವ್ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಡೆದ ಶ್ರೀಕೃಷ್ಣ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಶ್ರೀ ಕೃಷ್ಣನು ಪುರತಾನ ಕಾಲದ ಸುಪ್ರಸಿದ್ಧ ಸಂಧಾನಕಾರರಾಗಿದ್ದಾರೆ. ಶ್ರೀ ಕೃಷ್ಣನ ಹೇಳಿದ ತತ್ವಗಳು ಪ್ರತಿ ಮನೆ ಮನೆಯಲ್ಲೂ ಸ್ಮರಣೆಯಾಗಬೇಕು ಎಂದು ಸಲಹೆ ಮಾಡಿದರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್ ಅವರು ಮಾತನಾಡಿ, ಮಹಾಭಾರತದಲ್ಲಿ ಪಾಂಡವರು ಜಯಿಸಲು ಶ್ರೀ ಕೃಷ್ಣನೇ ಕಾರಣಕರ್ತರು, ಶ್ರೀಕೃಷ್ಣನ ತತ್ವಗಳು, ಉಪನಿಷತ್ತುಗಳನ್ನು ನಮ್ಮ ಜೀವನದ ಮೌಲ್ಯಕ್ಕೆ ಅಳವಡಿಸಿಕೊಂಡರೆ ಸಮಾಜದ ಅಭಿವೃದ್ಧಿ ಸಾಧ್ಯ, ಸೌಮ್ಯತೆಯ ಒಡನಾಟದಿಂದ ಬಾಳುವ ಸಮಾಜವೆಂದರೆ ಯಾದವ ಸಮಾಜವಾಗಿದೆ ಎಂದು ತಿಳಿಸಿದರು.

ಈ ವೇಳೆ ವಿಧಾನ ಪರಿಷತ್ ಸದಸ್ಯರಾದ ಎ.ವಸಂತಕುಮಾರ ಅವರು ಮಾತನಾಡಿ, ಯಾವುದೇ ಸಮಾಜವು ಪರಿಪೂರ್ಣವಾಗಿ ಅಭಿವೃದ್ಧಿ ಹೊಂದಲು ಶಿಕ್ಷಣ ಅತ್ಯಂತ ಮುಖ್ಯವಾಗಿದ್ದು, ಪ್ರತಿಯೊಬ್ಬರು ತಮ್ಮ ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡುವ ಮೂಲಕ ಸಮಾಜ ಹಾಗೂ ದೇಶಕ್ಕೆ ಕೊಡುಗೆ ನೀಡಬೇಕು ಎಂದರು.

ಇದೆ ವೇಳೆ ಕೆ.ಶಾಂತಪ್ಪ ಅವರು ಮಾತನಾಡಿ, ಸಂಘಟನೆಯಿದ್ದರೆ ಒಗ್ಗಟ್ಟು, ಒಗ್ಗಟ್ಟಾಗಿ ಇದ್ದರೆ ಸಮಾಜವು ಸಾಮಾಜಿಕವಾಗಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ ಮತ್ತು ರಾಜಕೀಯವಾಗಿ ಮುಂದೆ ಬರಲು ಸಾಧ್ಯ. ಪ್ರತಿಯೊಬ್ಬರು ಒಗ್ಗಟ್ಟಿನಿಂದ, ಸೌಹಾರ್ಧತೆಯ ಬದುಕನ್ನು ಕಟ್ಟಿಕೊಳ್ಳಲು ಮುಂದಾಗಬೇಕೆಂದರು.

2ನೇ ಪುಟಕ್ಕೆ

## ಗೌರಿ ಗಣೇಶ ಹಬ್ಬವನ್ನು ಶಾಂತಿ ಸೌಹಾರ್ದತೆಯಿಂದ ಆಚರಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ ಮನವಿ



ಯುವ ಮಾರ್ಗ ಸುದ್ದಿ

**ರಾಯಚೂರು,ಆ.16–** ಆಗಸ್ಟ್ 27ರಂದು ಜಿಲ್ಲೆಯಲ್ಲಿ ಶ್ರೀಗೌರಿ ಗಣೇಶ ಚತುರ್ಥಿ ಹಬ್ಬವನ್ನು ಅರ್ಥಪೂರ್ಣವಾಗಿ, ಶಾಂತಿ ಸೌಹಾರ್ದಯುತವಾಗಿ ಆಚರಿಸಲು ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಜಿಲ್ಲಾಧಿಕಾರಿ ನಿತೀಶ್ ಕೆ.ಅವರು ಹೇಳಿದರು. ಆಗಸ್ಟ್ 16ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಏರ್ಪಡಿಸಿದ್ದ ಶಾಂತಿಪಾಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ ಹಬ್ಬವನ್ನು ಸಂಭ್ರಮದಿಂದ ಆಚರಿಸುವಂತೆ ವಿವಿಧ ಸಮಿತಿ ಮತ್ತು ಸಂಘ ಸಂಸ್ಥೆಗಳ ಪ್ರತಿನಿಧಿಗಳಿಗೆ ಜಿಲ್ಲಾಧಿಕಾರಿಗಳು ತಿಳಿಸಿದರು. ಹಬ್ಬದಲ್ಲಿ ಪಿಒಪಿ ಹಾಗೂ ರಾಸಾಯನಿಕ ಬಣ್ಣಗಳ ಮಿಶ್ರಿತ ಮೂರ್ತಿಗಳನ್ನು ಪ್ರತಿಷ್ಠಾಪಿಸದೇ ಪರಿಸರ ಸ್ನೇಹಿ ವಿಗ್ರಹಗಳನ್ನು ಸ್ಥಾಪಿಸಬೇಕು. ಜಿಲ್ಲೆಯಾದ್ಯಂತ ಮಣ್ಣಿನಿಂದ ತಯಾರಿಸಿದ ಗಣೇಶ ವಿಗ್ರಹಗಳನ್ನು ಸ್ಥಾಪಿಸಿ ಸರ್ಕಾರ ನಿಗದಿಪಡಿಸಿದ ನಿಯಮಗಳನ್ನು ಪಾಲಿಸಬೇಕು ಎಂದು ಜಿಲ್ಲಾ ಧಿಕಾರಿಗಳು ಸಾರ್ವಜನಿಕರಲ್ಲಿ ಮನವಿ ಮಾಡಿದರು. ಸುಗಮ ಸಂಚಾರಕ್ಕೆ ತೊ ಂದರೆಯಾಗದಂತೆ ಪ್ರತಿಮೆಯನ್ನು ಸಾರ್ವಜನಿಕ ರಸ್ತೆಯಲ್ಲಿ ಪ್ರತಿಷ್ಠಾಪನೆ ಮಾ ಡಬಾರದು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

**ಭಾವೈಕ್ಯತೆಯಿಂದ ಹಬ್ಬ ಆಚರಿಸಿ:** ರಾಯಚೂರಿನ ಎಲ್ಲ ಸಮಾಜ ಭಾಂದವರು ಭಾವೈಕ್ಯತೆಯಿಂದ ಎಲ್ಲರೂ ಒಡಗೂಡಿ ಹಬ್ಬ ಆಚರಿಸಬೇಕು. ಧ್ವನಿವರ್ಧಕಗಳಿಂದ ಯಾರಿಗೂ ಸಹ ತೊಂದರೆಯಾಗಬಾರದು. ಹಿರಿಯ ನಾಗರಿಕರು, ಮಕ್ಕಳು, ಪ್ರಾಣಿಗಳಿಗೆ ತೊಂದರೆಯಾಗದಂತೆ ಶ್ರೀಗಣೇಶ ಮಂಡಳಿಗಳು ಮಾರ್ಗಸೂಚಿ ಪಾಲನೆಯ ಬಗ್ಗೆ ನಿಗಾವಹಿಸಿ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಗೆ ಸಹಕರಿಸಬೇಕೆಂದು ಜಿಲ್ಲಾಧಿಕಾರಿಗಳು ವಿವಿಧ ಸಮಾಜದ ಮುಖಂಡರಲ್ಲಿ

ಕೋರಿದರು. ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಎಲ್ಲರೂ ತಪ್ಪದೇ ಪೂರ್ವ ಪರವಾನಿಗೆಯನ್ನು ಸಂಬಂಧಿಸಿದ ಇಲಾಖೆಯವರಿಂದ ಪಡೆಯಬೇಕು. ನಿಗದಿತ ನಮೂನೆಯಲ್ಲಿ ಮುಂಚಿತವಾಗಿ ಅರ್ಜಿ ಸಲ್ಲಿಸಬೇಕು. ಆಯೋಜಕರು ಸಲ್ಲಿಸುವ ಅರ್ಜಿಗಳನ್ನು ಸಂಬಂಧಿಸಿದ ಇಲಾಖೆಗಳು ಜಂಟಿ ತಪಾಸಣೆ ಮಾಡಿ ನಿಯಮಾನುಸಾರ ಪರವಾನಿಗೆಯನ್ನು ನೀಡಲು ಕ್ರಮ ವಹಿಸುತ್ತವೆ. ರಾತ್ರಿ 10.30ರೊಳಗಾಗಿ ವಿಗ್ರಹಗಳನ್ನು ವಿಸರ್ಜನೆ 2ನೇ ಪುಟಕ್ಕೆ

## ಮಾಹಿತಿ ಹಕ್ಕು ಅರ್ಜಿಗಳಿಗೆ ಉಡಾಫೆ ಬೇಡ, ಉತ್ತರ ನೀಡಿ

ಯುವ ಮಾರ್ಗ ಸುದ್ದಿ

**ರಾಯಚೂರು,ಆ.16–** ಮಾಹಿತಿ ಕೋರಿ ಬರುವ ಅರ್ಜಿಗಳಿಗೆ ಉಡಾಫೆ ಮಾಡದೇ ಶೀಘ್ರ ಉತ್ತರ ನೀಡಿ ಅರ್ಜಿಗಳನ್ನು ವಿಲೇ ಮಾಡಬೇಕು ಎಂದು ಪೀಠ ಸಂಖ್ಯೆ 04ರ ರಾಜ್ಯ ಮಾಹಿತಿ ಆಯುಕ್ತರಾದ ರುದ್ರಣ್ಣ ಹರ್ತಿಕೋಟಿ ಹಾಗೂ ಪೀಠ ಸಂಖ್ಯೆ 05ರ ರಾಜಶೇಖರ ಎಸ್ ಅವರು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಆಗಸ್ಟ್ 16ರಂದು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿದ ರುದ್ರಣ್ಣ ಹರ್ತಿಕೋಟಿ, ಆಯೋಗವು ಮಾಹಿತಿ ಹಕ್ಕು ಕಾಯಿದೆಯನ್ವಯ ನಿಯಮದಂತೆ 30 ದಿನಗಳಲ್ಲಿ ಮಾಹಿತಿ ನೀಡಿದಿದ್ದರೆ ಉಚಿತವಾಗಿ ನೀಡಬೇಕಾಗುತ್ತದೆ. ಇದು ಸರ್ಕಾರಕ್ಕೆ ಹೊರೆಯಾಗುತ್ತದೆ. ಆದ್ದರಿಂದ ಲಭ್ಯವಿರುವ ಮಾಹಿತಿ ಕೊಡಬೇಕು. ಯಾವುದನ್ನು ಸಹ ಕ್ರೋಢಿಕರಿಸಿ ನೀಡಬೇಕಾಗಿಲ್ಲ ಎಂದು ತಿಳಿಸಿದರು.

ಸಾರ್ವಜನಿಕ ಪ್ರಾಧಿಕಾರಗಳಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿ ನೇಮಕವಾಗಿರುತ್ತಾರೆ. ಆ ಮಾಹಿತಿ ಅಧಿಕಾರಿಯು ಮೊದಲು ಯಾವುದು ಮಾಹಿತಿ, ಯಾವುದು ಮಾಹಿತಿಯಲ್ಲ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು. ಅರ್ಜಿಗಳಿಗೆ ನಿಗದಿತ ಕಾಲಾವಧಿಯಲ್ಲಿ ಮಾಹಿತಿ ನೀಡಿದರೆ ಅದರಿಂದ ಬ್ಲಾಕ್ ಮೇಲಗರ್‌ಗಳು ಹುಟ್ಟಿಕೊಳ್ಳುವುದಿಲ್ಲ. ನಿಮ್ಮಲ್ಲಿ ಲಭ್ಯವಿರುವ ಮಾಹಿತಿಯನ್ನು ಮೊದಲು ನೀಡಿ, ಯಾವುದೇ ಅರ್ಜಿಯ ಬಗ್ಗೆ ಉದಾಸೀನ ಮಾಡಲು ಹೋಗಬೇಡಿ ಎಂದು ತಿಳಿಸಿದರು. ರಾಜ್ಯ ಮಾಹಿತಿ ಆಯೋಗವು ಗಮನಿಸಿದಂತೆ ಅನೇಕ ಪಿಐಒಗಳು ನಿಯಮಗಳನ್ನು ಸರಿಯಾಗಿ ಓದುವುದಿಲ್ಲ. ಹೀಗೆ ಆಗಬಾರದು ಎಂದು ಆಯುಕ್ತರಾದ ರುದ್ರಣ್ಣ ಹರ್ತಿಕೋಟಿ ಅವರು ಎಚ್ಚರಿಕೆ ನೀಡಿದರು.

ನಿಗದಿತ ಅವಧಿಯೊಳಗೆ ಮಾಹಿತಿ ಒದಗಿಸದಿದ್ದ ಪಕ್ಷದಲ್ಲಿ ಮಾಹಿತಿ ಒದಗಿಸದ



ಅಧಿಕಾರಿಗಳ ಮೇಲೆ ದಂಡ ವಿಧಿಸಲು ಕಾಯಿದೆಯಲ್ಲಿಯೇ ಅವಕಾಶವಿದೆ. ಒಂದು ದಿನಕ್ಕೆ 250 ರೂ. ದಂತೆ 100 ದಿನಗಳವರೆಗೆ ದಂಡ ವಿಧಿಸಲು ಅವಕಾಶವಿದೆ. ಮಾಹಿತಿ ಒದಗಿಸಲು ವಿಳಂಬ ಮಾಡಿರುವುದು ಗೊತ್ತಾದಲ್ಲಿ ಕನಿಷ್ಟ 25 ಸಾವಿರ ರೂ.ವರೆಗೆ ದಂಡ ವಿಧಿಸಲು ಅವಕಾಶವಿದೆ. ಅರ್ಜಿದಾರರಿಗೆ ನಷ್ಟವಾಗಿದ್ದಲ್ಲಿ ಪರಿಹಾರ ಕೂಡ ಕೊಡಿಸಬಹುದಾಗಿದೆ. ಅರ್ಜಿದಾರರಿಗೆ 1 ಲಕ್ಷ ರೂ.ವರೆಗೆ ಪರಿಹಾರ ಕೊಡಿಸಿದ ಉದಾಹರಣೆಗಳಿವೆ. ಈ ರೀತಿಯ ದಂಡ ವಿಧಿಸಿದ ಪ್ರಕರಣಗಳು ಆಯೋಗದಲ್ಲಿ ಸಾಕಷ್ಟಿವೆ ಎಂದು ತಿಳಿಸಿದರು.

ಅರ್ಜಿದಾರರು ಕೇಳಿದಾಕ್ಷಣ ನಾವು ದಂಡ ವಿಧಿಸುವುದಿಲ್ಲ. ಅಧಿಕಾರಿಗಳಿಗೆ ಮೂರು ಬಾರಿ ಅವಕಾಶ ಕೊಡುತ್ತೇವೆ. ಮೂರು ಬಾರಿಯು ಅವರು ಬರದೇ ಇದ್ದಾಗ, ಮಾಹಿತಿಯನ್ನು ಕೊಡದೇ ಇದ್ದಾಗ ಮಾತ್ರ ದಂಡ ಹಾಕುವ ಪ್ರಯೋಗ ನಡೆಯುತ್ತದೆ. ದಂಡ ಹಾಕಿದಲ್ಲಿ ಅದು ಆಯಾ ನೌಕರರ ಸೇವಾ ಪುಸ್ತಕದಲ್ಲಿ ದಾಖಲಾಗುತ್ತದೆ. ಅವರ ಸಂಬಳದಲ್ಲಿ ಹಣ ಕಡಿತವಾಗುತ್ತದೆ. ಸೇವಾ ಪುಸ್ತಕದಲ್ಲಿ ಇದು ದಾಖಲಾದಲ್ಲಿ ಮುಂದೆ ನಿವೃತ್ತಿ ಕಾಲದಲ್ಲಿ ಪಿಂಚಣಿಗೆ ಸಮಸ್ಯೆಯಾಗಲಿದೆ. ಮಾಹಿತಿ ಹಕ್ಕಿನಡಿ ಬರುವ ಅರ್ಜಿಗಳಿಗೆ ಸಕಾಲಕ್ಕೆ ಮಾಹಿತಿ ಒದಗಿಸದೇ ದಂಡ ಕಟ್ಟಿ ಅದು ಆ ನೌಕರರ ಎಸ್‌ಆರ್‌ನಲ್ಲಿ ದಾಖಲಾಗಿ ಪಿಂಚಣಿಗೆ ಸಮಸ್ಯೆಯಾದ ಪ್ರಕರಣಗಳು ಕೂಡ ಆಯೋಗದಲ್ಲಿ ದಾಖಲಾಗಿವೆ. ಈ ಬಗ್ಗೆ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳು ಅರಿತು ಎಚ್ಚೆತ್ತುಕೊಳ್ಳಬೇಕು ಎಂದು ತಿಳಿಸಿದರು.

ಕೆಲವು ಪ್ರಕರಣಗಳಲ್ಲಿ ಹಣ ಹೆಚ್ಚಿಗೆ ಕಟ್ಟಿಸಿಕೊಂಡು ಕಡಿಮೆ ಪುಟ ಮಾಹಿತಿ ನೀಡಲಾಗುತ್ತದೆ. ಇದು ತಪ್ಪಾಗುತ್ತದೆ. ನಕ್ಷೆ ಕೇಳಿದಾಗ ಕೇವಲ ಔಟ್‌ಲೈನ್ ಮಾತ್ರ ನೀಡಬೇಕು. ಮೂರನೇ ವ್ಯಕ್ತಿಯ ಮಾಹಿತಿ ಕೇಳಿದ್ದರೆ ಐದು ದಿನಗಳಲ್ಲಿ ಆ ವ್ಯಕ್ತಿಗೆ ನೋಟೀಸ್ ನೀಡಿ ಮಾಹಿತಿ ನೀಡಬಹುದೇ ಅಥವಾ ಬೇಡವೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಅವರು ತಿಳಿಸಿದರು.

**ಸೂಕ್ತ ಹಿಂಬರಹ ನೀಡಲು ಸೂಚನೆ:** ಪೀಠ ಸಂಖ್ಯೆ 05ರ ರಾಜ್ಯ ಮಾಹಿತಿ ಆಯುಕ್ತರಾದ ರಾಜಶೇಖರ ಎಸ್ ಅವರು ಮಾತನಾಡಿ, ಮಾಹಿತಿ ಹಕ್ಕು ಅರ್ಜಿ ಸ್ವೀಕೃತಿಯಾದ ಕೂಡಲೇ ಆ ಬಗ್ಗೆ ನಿರ್ಲಕ್ಷ ?? ಮಾಡದೇ ವಿಲೇವಾರಿ ಮಾಡಲು ನಿಯಮಾನುಸಾರ ಕ್ರಮ ವಹಿಸಬೇಕು. ಮಾಹಿತಿ ಲಭ್ಯವಿಲ್ಲದಿದ್ದಲ್ಲಿ ಅದಕ್ಕೆ ಸೂಕ್ತ ಹಿಂಬರಹ ನೀಡಬೇಕು ಎಂದು ತಿಳಿಸಿದರು.

ಮಾಹಿತಿ ಹಕ್ಕು ಅರ್ಜಿ ಬಂದ ನಿಗದಿತ ಅವಧಿಯಲ್ಲಿ ಉತ್ತರ ನೀಡಬೇಕು. ಅದರ ಪ್ರತಿಯನ್ನು ಆಯೋಗಕ್ಕು ಸಹ ಕಳುಹಿಸಬೇಕು. ಆನ್‌ಲೈನದಲ್ಲಿ ಬಂದಾಗ ಮಾಹಿತಿ ಕೊಟ್ಟಿರುವುದಾಗಿ ಹೇಳುತ್ತಾರೆ. ಆದರೆ ಕೊಟ್ಟಿರುವ ಮಾಹಿತಿಯನ್ನು ನಮಗೆ ಕಳುಹಿಸದ ಕಾರಣ ಆದೇಶ ಮಾಡಲು ಸಮಸ್ಯೆಯಾಗುತ್ತದೆ ಎಂಬುದನ್ನು ಅಧಿಕಾರಿಗಳು ಮತ್ತು ಸಿಬ್ಬಂದಿ ಅರಿಯಬೇಕು ಎಂದು ತಿಳಿಸಿದರು.

ಪ್ರಥಮ ಮೇಲ್ಮನವಿ ಸಲ್ಲಿಸುವ ಅರ್ಜಿಗಳ ವಿಚಾರಣೆಯನ್ನು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳು ನಿಯಮಬದ್ಧವಾಗಿ ಮಾಡಿದರೆ ಸಮಸ್ಯೆಯೇ ಇರುವುದಿಲ್ಲ. ಅನೇಕ ಕಡೆಗಳಲ್ಲಿ ಪ್ರಥಮ ಮೇಲ್ಮನವಿ ವಿಚಾರಣೆಗಳೇ ಸರಿಯಾಗಿ ಆಗುತ್ತಿಲ್ಲ. ಗ್ರಾಮೀಣಾಭಿವೃದ್ಧಿ,

## ಮೊದಲನೇಯ ಪುಟದಿಂದ

# ರಾಯಚೂರು ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ವರ್ಷದಲ್ಲಿ 1203 ಹೆರಿಗೆ ನಿರ್ವಹಿಸಿದ ಸಾಧನೆ

ಬೆಂಬಲ ನೀಡಿರುವ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲೆಯ ಸಚಿವರು, ಸಂಸದರು, ಶಾಸಕರು, ಜನಪ್ರತಿನಿಧಿಗಳು ಹಾಗೂ ಜಿಲ್ಲಾಡಳಿತವನ್ನು ಸದಾ ಸ್ಮರಿಸುತ್ತೇವೆ. ಮಕ್ಕಳ ಬೆಳವಣಿಗೆಯ ನ್ಯೂನ್ಯತೆಗಳನ್ನು ಗುರುತಿಸಿ ಚಿಕಿತ್ಸೆ ನೀಡುವ ಜಿಲ್ಲಾ ಆರಂಭಿಕ ಮಧ್ಯಸ್ಥಿಕೆ ಕೇಂದ್ರವನ್ನು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ಮಾರ್ಗದರ್ಶನದಲ್ಲಿ ಶೀಘ್ರದಲ್ಲಿಯೇ ಆರಂಭಿಸಲಾಗುತ್ತಿದೆ ಎಂದು ಇದೆ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರಬಾಬು ಅವರು ತಿಳಿಸಿದ್ದಾರೆ.

ನಗರದ ನವೋದಯ ವೈದ್ಯಕೀಯ ಮಹಾವಿದ್ಯಾಲಯದ ಸಹಯೋಗದಲ್ಲಿ ತಜ್ಞ ವೈದ್ಯರು, ಸ್ನಾತ್ತಕೋತ್ತರ ವೈದ್ಯ ವಿದ್ಯಾರ್ಥಿಗಳು ಆಸ್ಪತ್ರೆಯಲ್ಲಿ ಹೆರಿಗೆ ನಿರ್ವಹಣೆ, ಮಕ್ಕಳ ಆರೈಕೆ ಚಿಕಿತ್ಸೆಗೆ ನಿರಂತರವಾಗಿ ಸಹಕರಿಸುತ್ತಿರುವುದರಿಂದ ಈ ಸಾಧನೆ ಮಾಡಲು ಸಹಕಾರಿಯಾಗಿದೆ. ಪ್ರಸ್ತುತ 4 ಪ್ರಸೂತಿ ತಜ್ಞರು, 3 ಮಕ್ಕಳ ತಜ್ಞರು, ಸೇರಿದಂತೆ ರೆಡಿಯಾಲಜಿಸ್ಟ್ ಡಾ ಪ್ರಜ್ವಲ್‌ಕುಮಾರ ಆಡಳಿತ ವೈದ್ಯಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಡಿಎಚ್‌ಓ ಅವರು ತಿಳಿಸಿದ್ದಾರೆ.

ಈಗಾಗಲೆ ಪ್ರತಿ ತಿಂಗಳು 09 ಹಾಗೂ 24 ತಾರೀಖುಗಳಂದು ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಡಿ ಗಂಡಾಂತರ ಗರ್ಭಿಣಿಯರು ಸೇರಿದಂತೆ ಎಲ್ಲ ಗರ್ಭಿಣಿಯರ ಆರೋಗ್ಯ ತಪಾಸಣೆಯನ್ನು ಪ್ರಸೂತಿ ತಜ್ಞರ ನೇತೃತ್ವದಲ್ಲಿ ಮಾಡುವ ಮೂಲಕ ಹೆರಿಗೆ ದಿನಾಂಕ, ಮಗುವಿನ ಬೆಳವಣಿಗೆ, ಕಬ್ಬಿಣಾಂಶ ಮಾತ್ರೆಗಳ ಸೇವನೆ, ಪೌಷ್ಟಿಕಾಹಾರ ಮಹತ್ವ ಕುರಿತು ಜಾಗೃತಿ ನೀಡಲಾಗುತ್ತದೆ. 3 ನುರಿತ ಮಕ್ಕಳ ತಜ್ಞರ ಮೂಲಕ ಹೆರಿಗೆ ನಂತರ ಮಕ್ಕಳಿಗೆ ಕಂಡು ಬರಬಹುದಾದ ಯಾವುದೇ ಆರೋಗ್ಯ ಸಮಸ್ಯೆಗಳಿಗೆ, ಮಕ್ಕಳ ಇತರ ಆರೋಗ್ಯದ ಸಮಸ್ಯೆಗಳನ್ನು ಗುರುತಿಸಿ ಚಿಕಿತ್ಸೆಯನ್ನು ನೀಡಲಾಗುತ್ತಿದ್ದು, ಇಲ್ಲಿಯವರೆಗೆ 465 ಮಕ್ಕಳಿಗೆ ಒಳರೋಗಿಗಳಾಗಿ ಚಿಕಿತ್ಸೆ ನೀಡಲಾಗಿದೆ ಎಂದು ಇದೆ ವೇಳೆ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ ನಂದಿತಾ ಎಮ್ ಎನ್ ಅವರು ಪ್ರತಿಕ್ರಿಯಿಸಿದ್ದಾರೆ.

# ಗೌರಿ ಗಣೇಶ ಹಬ್ಬವನ್ನು ಶಾಂತಿ ಸೌಹಾರ್ದತೆಯಿಂದ ಆಚರಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ ಮನವಿ

ಮಾಡುವಂತೆ ಸಮಯ ನಿಗದಿಗೊಳಿಸಲಾಗಿದೆ. ಅದರಂತೆ ನಿಯಮಾನುಸಾರ ವಿಸರ್ಜನೆ ಮಾಡಬೇಕು.ಶಬ್ದ ಮಾಲಿನ್ಯ ಮಾಡುವ ಬೃಹತ್ ಧ್ವನಿವರ್ಧಕಗಳನ್ನು ನಿಷೇಧಿಸಲಾಗಿದ್ದು, ಮಾರ್ಗಸೂಚಿಯನ್ವಯ ಧ್ವನಿವರ್ಧಕ ಬಳಸಬೇಕು. ನಿಯಮ ಉಲ್ಲಂಘಿಸಿದಲ್ಲಿ ಕ್ರಮಕೈಗೊಳ್ಳಲಾಗುವುದು ಎಂದರು.

ಗಣೇಶ ವಿಸರ್ಜನೆಯ ದಿನಗಳಂದು ವಿದ್ಯುತ್ ವ್ಯತಯವಾಗದಂತೆ ನಿರಂತರ ವಿದ್ಯುತ್ ಪೂರೈಸಲು ಜೆಸ್ಕಾಂ ಇಲಾಖೆ ಕ್ರಮ ವಹಿಸಬೇಕು. ಪೊಲೀಸರು ಸೂಕ್ತ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಬೇಕು. ಗಣೇಶ ವಿಸರ್ಜನೆಯ ದಿನದಂದು ಸಂಚಾರ ವ್ಯವಸ್ಥೆಗೆ ಅಡೆ ತಡೆಯಾಗದಂತೆ ಮತ್ತು ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗದಂತೆ ಸಹಕರಿಸಬೇಕು. ಅಲ್ಲದೆ ಅಗತ್ಯವಿರುವ ಕಡೆ ಸಿ.ಸಿ.ಕ್ಯಾಮರಾಗಳನ್ನು ಆಯೋಜಕರು ಮತ್ತು ಸಂಬಂಧಿತ ಇಲಾಖೆಗಳು ಅಳವಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪಾತ್ರ ಮಾತನಾಡಿ, ಪರಿಸರ ರಕ್ಷಣೆಯು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಪರಿಸರ ಹಾನಿಯಾಗದಂತೆ ಗಣೇಶೋತ್ಸವ ಆಚರಣೆ ಮಾಡಬೇಕು. ಪಿಓಪಿ ವಿಗ್ರಹಗಳನ್ನು ಬಹುತೇಕ ಎಲ್ಲಾ ಜಿಲ್ಲೆಗಳಲ್ಲಿ ನಿಷೇಧಿಸಲಾಗಿದೆ. ಇದನ್ನು ಅರಿತು ರಾಯಚೂರ ಸಿಟಿಯ ನಾಗಕರಿಕರು ನಾವು ಪಿಓಪಿ ಗಣೇಶ ಮೂರ್ತಿ ಬಳಸುವುದಿಲ್ಲ ಎಂದು ಸಂಕಲ್ಪ ಮಾಡಿ ಮಣ್ಣಿನಿಂದ ನಿರ್ಮಿಸಿದ ವಿಗ್ರಹಗಳ ಬಳಕೆಗೆ ಒತ್ತು ಕೊಡಬೇಕು. ಪ್ಲಾಸ್ಟಿಕ್ ಬಳಕೆಯನ್ನು ಕಡ್ಡಾಯವಾಗಿ ನಿಷೇಧಿಸಲಾಗಿದ್ದು ಯಾರು ಸಹ ಬಳಸಕೂಡದು ಎಂದು ತಿಳಿಸಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹರೀಶ ಜಿ. ಅವರು ಮಾತನಾಡಿ, ಗಣೇಶೋತ್ಸವಕ್ಕೆ ಪೊಲೀಸ್ ಇಲಾಖೆಯಿಂದ ಸೂಕ್ತ ಭದ್ರತೆಯನ್ನು ಒದಗಿಸಲಾಗುವುದು. ಗಣೇಶೋತ್ಸವ ಮತ್ತು ಈದ್ ಮಿಲಾದ್ ಹಬ್ಬಗಳು ಶಾಂತಿಯುವಾಗಿ ನಡೆಯಲು ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ ಸಮಾಜದ ಮುಖಂಡರಾದ ಶ್ರೀನಿವಾಸ ಪತಂಗೆ ಅವರು ಮಾತನಾಡಿ, ಗಣೇಶ ಹಬ್ಬದ ಆಚರಣೆ ಸುಗಮವಾಗಿ ನಡೆಯುವ ನಿಟ್ಟಿನಲ್ಲಿ ಎಲ್ಲಾ ಗಣೇಶ ಪ್ರತಿಷ್ಠಾಪನಾ ಸಮಿತಿಗಳು ಇಲಾಖೆಗಳೊಂದಿಗೆ ಸಹಕರಿಸಲಿವೆ ಎಂದರು. ಆದರೆ ನಗರದ ಕಲ್ಲಾನೆಯ ಸುತ್ತಲು ಸ್ವಚ್ಛತೆಯೇ ಮಾಡುವುದಿಲ್ಲ. ಈ ಬಗ್ಗೆ ಪಾಲಿಕೆಯು ಹೆಚ್ಚಿನ ಗಮನ ಹರಿಸಬೇಕು ಎಂದು ಮನವಿ ಮಾಡಿದರು.

ಮುಖಂಡರಾದ ರವೀಂದ್ರ ಜಲ್ದಾರ್ ಅವರು ಮಾತನಾಡಿದರು. ಇದೇ ಸಂದರ್ಭದಲ್ಲಿ ಪೊಲೀಸ್ ಇಲಾಖೆ ಎರಡನೇ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಕುಮಾರಸ್ವಾಮಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ, ವಿವಿಧ ಸಮಾಜದ ಮುಖಂಡರು, ಗಜಾನನ ಮಂಡಳಿಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಶ್ರೀ ಕೃಷ್ಣನ ಆದರ್ಶಗಳನ್ನು ಪಾಲನೆ ಮಾಡೋಣ: ಸಂಸದ ಜಿ.ಕುಮಾರ ನಾಯಕ

ಈ ವೇಳೆ ಶ್ರೀಕೃಷ್ಣನ ಕುರಿತು ಪ್ರದೀಪ್ ಕುಮಾರ್ ದೀಕ್ಷಿತ್ ಅವರು ವಿಶೇಷ ಉಪನ್ಯಾಸ ನೀಡಿದರು. ಶ್ರೀಕೃಷ್ಣ ಭಾವಚಿತ್ರ ಮೆರವಣಿಗೆ: ಶ್ರೀಕೃಷ್ಣ ಜಯಂತಿಯ ಅಂಗವಾಗಿ ಬೆಳಗ್ಗೆ 9 ಗಂಟೆಗೆ ರಾಯಚೂರಿನ ನಗರೇಶ್ವರ ದೇವಾಸ್ಥಾನದಿಂದ ಶ್ರೀ ಕೃಷ್ಣ ದೇವಸ್ಥಾನದ ಆವರಣದವರೆಗೆ ಶ್ರೀ ಕೃಷ್ಣ ಭಾವಚಿತ್ರವನ್ನು ಅದ್ದೂರಿ ಮೆರವಣಿಗೆ ಮಾಡಲಾಯಿತು. ಈ ವೇಳೆ ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಸ್ಥಳೀಯ ಸಂಸ್ಥೆಯ ಜನಪ್ರತಿನಿಧಿಗಳು ಮೆರವಣಿಗೆಯಲ್ಲಿ ಭಾಗಿಯಾಗಿ ಮೆರುಗು ಹೆಚ್ಚಿಸಿದರು.

ವಿವಿಧ ಗಣ್ಯರಿಗೆ ಸನ್ಮಾನ: ನಗರದ ಶ್ರೀ ಕೃಷ್ಣ ದೇವಸ್ಥಾನದ ಆವರಣದಲ್ಲಿರುವ ಯಾದವ್ ಕಲ್ಯಾಣ ಮಂಟಪದಲ್ಲಿ ಯಾದವ್ ಸಮಾಜದಿಂದ ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್, ಸಂಸದರಾದ ಜಿ.ಕುಮಾರ ನಾಯಕ, ವಿಧಾನ ಪರಿಷತ್ ಸದಸ್ಯರಾದ ಎ.ವಸಂತಕುಮಾರ್ ಸೇರಿದಂತೆ ವಿವಿಧ ಗಣ್ಯರಿಗೆ ಸನ್ಮಾನ ಮಾಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಪಾಲಿಕೆಯ ಹಿರಿಯ ಸದಸ್ಯರಾದ ಜಯಣ್ಣ, ಪಾಲಿಕೆಯ ಸದಸ್ಯರಾದ ಬಿ.ರಮೇಶ,

ಶಶಿಧರ, ಆರ್.ಡಿ.ಎ.ಸದಸ್ಯರಾದ ನರಸಿಂಹಲು, ಮುಖಂಡರಾದ ತಿಮ್ಮಪ್ಪ ನಾಡಗೌಡರು, ಎ.ಮಾರೆಪ್ಪ ವಕೀಲರು, ರಾಜಶೇಖರ ನಾಯಕ, ಮೊಹಮದ್ ಶಾಲಂ, ಕೆ.ಶಾಂತಪ್ಪ, ಸಮಾಜದ ಮುಖಂಡರಾದ ಡಿ.ಕೆ.ಮುರುಳೀಧರ್ ಯಾದವ, ರಮೇಶ ಯಾದವ್, ದಾರಪ್ಪ ಯಾದವ್ ಸೇರಿದಂತೆ ಇತರರು ಇದ್ದರು.

# ಮಾಹಿತಿ ಹಕ್ಕು ಅರ್ಜಿಗಳಿಗೆ ಉಡಾಫೆ ಬೇಡ, ಉತ್ತರ ನೀಡಿ

ಕಂದಾಯ, ನಗರಾಭಿವೃದ್ಧಿ ಇಲಾಖೆಗಳಿಂದ ಅತಿ ಹೆಚ್ಚಿನ ಅರ್ಜಿಗಳು ಬರುತ್ತಿವೆ. ಇಲಾಖೆಗಳು 4(1)ಎ, 4(1) ಬಿ ಸರಿಯಾಗಿ ರೂಪಿಸಿಲ್ಲ. ಅದರಿಂದಾಗಿ ಸಮಸ್ಯೆ ಹೆಚ್ಚಾಗುತ್ತಿದೆ. 4(1) ಎ ಪ್ರಕಾರ ದಾಖಲೆಗಳ ನಿರ್ವಹಣೆಯಾದರೆ ಹಾಗೂ 4(1)ಬಿ ಯಲ್ಲಿ 17 ಅಂಶಗಳ ಸ್ವಯಂ ಘೋಷಣೆಯಾದರೆ ಪಿಐಒಗಳ ಮೇಲೆ ಹೊರೆ ಸಾಕಷ್ಟು ಕಡಿಮೆಯಾಗಲಿದೆ ಎಂದು ತಿಳಿಸಿದರು. ಯಾವುದೇ ಸಾರ್ವಜನಿಕ ಪ್ರಾಧಿಕಾರದಲ್ಲಿ 4(1)ಎ ಮತ್ತು ಬಿ ಮಾಡಿಲ್ಲ ಎಂಬುದಾದರೆ ಕೂಡಲೇ ಆ ನಿಟ್ಟಿನಲ್ಲಿ ಗಮನ ಹರಿಸುವುದು ಅಗತ್ಯವಾಗಿದೆ ಎಂದರು. ಅರ್ಜಿದಾರರು ಮಾಹಿತಿ ಹಕ್ಕು ಅಧಿನಿಯಮ 6(1)ರಲ್ಲಿ ಅರ್ಜಿ ಸಲ್ಲಿಸಿದರೆ, ಅದಕ್ಕೂ ಮುನ್ನ ಕಾಯ್ದೆಯ ಅನುಷ್ಠಾನ ಪರಿಣಾಮಕಾರಿಯಾಗಿ ಮಾಡಲು ಪಿಐಒಗಳು ಸಿದ್ಧರಾಗಬೇಕಾಗುತ್ತದೆ. ಕಾನೂನನ್ನು ಪೂರ್ಣ ಪ್ರಮಾಣದಲ್ಲಿ ಅರ್ಥ ಮಾಡಿಕೊಳ್ಳಬೇಕಾಗುತ್ತದೆ. ಕಾಯ್ದೆ ಹಾಗೂ ಕೆಲವೊಂದು ನ್ಯಾಯಾಲಯದ ಹಾಗೂ ವಿವಿಧ ಮಾಹಿತಿ ಆಯೋಗಗಳ ತೀರ್ಪುಗಳನ್ನು ಅಧ್ಯಯನ ಮಾಡಬೇಕು. ಇದು ಸರ್ಕಾರವೇ ರೂಪಿಸಿರುವ ಕಾಯ್ದೆಯಾಗಿದೆ. ಪರಿಣಾಮಕಾರಿ ಜಾರಿ ನಿಮ್ಮ ಜವಾಬ್ದಾರಿಯಾಗಿರುತ್ತದೆ ಎಂದು ತಿಳಿಸಿದರು.

ಮಾಹಿತಿ ಹಕ್ಕು ಕಾಯಿದೆಯಡಿ ಬರುವ ಅರ್ಜಿಗಳ ಬಗ್ಗೆ ಕೆಲವು ಅನುಮಾನಗಳಿವೆ. ಅದಕ್ಕೆ ಪರಿಹಾರ ಕಂಡುಕೊಳ್ಳಬೇಕು. ವೆಬ್‌ಸೈಟ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳುವಂತೆ ಕೆಲವರು ಹೇಳುತ್ತಾರೆ. ಆದರೆ ದೃಢೀಕರಣ ಪ್ರತಿ ಬೇಕು ಎಂಬುದನ್ನು ಅರಿಯಬೇಕು. ಮಾಹಿತಿ ಹಕ್ಕು ಅಧಿನಿಯಮದಡಿ ನೀಡಲಾಗಿದೆ ಎಂಬ ಮುದ್ರೆ ಹಾಕಿ ನೀಡಬೇಕು. ಕೆಲವರು ಸಿಡಿ ರೂಪದಲ್ಲಿ ನೀಡಿ ಎಂದು ಕೇಳಿರುತ್ತಾರೆ. ಎಲೆಕ್ಟ್ರಾನಿಕ್ಸ್ ರೂಪದಲ್ಲಿರುವುದನ್ನು ಮಾತ್ರ ಸಿ.ಡಿ.ಯಲ್ಲಿ ನೀಡಬಹುದು. ಎಲ್ಲ ಪುಟಗಳನ್ನು ಸ್ಕ್ಯಾನ್ ಮಾಡಲು ವೆಚ್ಚ ಹೆಚ್ಚಾಗುತ್ತದೆ ಎಂಬುದರ ತಿಳಿಯಬೇಕು ಎಂದು ಅವರು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳಿಗೆ ಸಲಹೆ ಮಾಡಿದರು.ಕಾರ್ಯಗಾರದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ಹಾಗೂ ವಿವಿಧ ಇಲಾಖೆಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳು ಇದ್ದರು.



ಮಾನ್ವಿ, 79 ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಮಾನ್ವಿ ಪಟ್ಟಣದ ತಾಲೂಕ ಕ್ರೀಡಾಂಗಣದಲ್ಲಿ ಜರುಗಿದ ಪಥಸಂಚನದಲ್ಲಿ ಪಟ್ಟಣದ ಸರ್ವೋದಯ ಪಬ್ಲಿಕ್ ಶಾಲೆ , ಪ್ರಾಥಮಿಕ ವಿಭಾಗದಲ್ಲಿ ಬಾಲಕರ ತೃತೀಯ ಸ್ಥಾನ ಪ್ರೌಢಶಾಲೆ ವಿಭಾಗದಲ್ಲಿ ಬಾಲಕರು ಪ್ರಥಮ ಸ್ಥಾನ ಹಾಗೂ ಅದೇ ರೀತಿಯಾಗಿ ಬಾಲಕಿಯರ ತೃತೀಯ ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.

# ಅಮೂಲ್ಯ ಸಮಯದ ಸದುಪಯೋಗಕ್ಕೆ ವಿರೂಪಾಕ್ಷ ಶಿವಾಚಾರ್ಯ ಮಹಾಸ್ವಾಮಿ ಕರೆ

ಯುವ ಮಾರ್ಗ ಸುದ್ದಿ



**ಮಾನ್ವಿ,ಆ.16–** ಇಲ್ಲಿನ ಸಂಗಮೇಶ್ವರ ವಿರಾಮಾಂಬೆ ಕಲ್ಮಠ ಡಿ. ಎಡ್ ಕಾಲೇಜಿನಲ್ಲಿ 2025–26ನೇ ಸಾಲಿನ ಪ್ರಥಮ ವರ್ಷದ ಡಿ. ಎಡ್. ಪ್ರಶಿಕ್ಷಣಾರ್ಥಿಗಳಿಗೆ ನಡೆದ ಸ್ವಾಗತ ಸಮಾರಂಭದಲ್ಲಿ ಷ. ಬ್ರ. ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿ ಅವರು ಆಶೀರ್ವಚನ ನೀಡಿ, ವಿದ್ಯಾರ್ಥಿಗಳು ಸಮಯವನ್ನು ಅಮೂಲ್ಯವೆಂದು ಪರಿಗಣಿಸಿ ಅದನ್ನು ಸದುಪಯೋಗಪಡಿಸಿ ಕೊಳ್ಳಬೇಕು ಎಂದು ಕರೆ ನೀಡಿದರು.

"ಒಂದು ವರ್ಷದ 365 ದಿನಗಳಲ್ಲಿ ನೀವು ಎಷ್ಟು ದಿನಗಳನ್ನು ಸರಿಯಾಗಿ ಬಳಸಿಕೊಳ್ಳುತ್ತೀರೋ, ಅಷ್ಟು ದಿನಗಳು ಮಾತ್ರ ನಿಮ್ಮೊಂದಿಗೆ ಉಳಿಯುತ್ತವೆ," ಎಂದು ಅವರು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಆಂಜನೇಯ ನಾಯಕ ನಸಲಾಪುರ ಅವರು, "ಶಿಕ್ಷಣ ಮತ್ತು ಸಂಸ್ಕಾರ ಬದುಕಿನ ಮೂಲ ಮಂತ್ರ. ಶಿಕ್ಷಣ ಎಂದಿಗೂ ಎಡವಲು ಬಿಡುವುದಿಲ್ಲ, ಸಂಸ್ಕಾರ ಕೆಡಲು ಬಿಡುವುದಿಲ್ಲ" ಎಂದು ಹೇಳಿದರು.

ಕಾಲೇಜಿನ ಹಿರಿಯ ಉಪನ್ಯಾಸಕ ಟಿ. ಶಿವಕುಮಾರ ಅವರು ಸಂಸ್ಥೆಯ ಬಗ್ಗೆ ಪ್ರಸ್ತಾವಿಕ ನುಡಿಗಳನ್ನು ಆಡಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಸಿದ್ದಮಲ್ಲಯ್ಯ ಹಿರೇಮಠ ಅವರು, ವಿದ್ಯಾರ್ಥಿಗಳು ಉತ್ತಮ ಜೀವನ ರೂಪಿಸಿಕೊಂಡು, ತಮ್ಮ ಹಾಗೂ ಪೋಷಕರ ಕನಸುಗಳನ್ನು ನನಸಾಗಿಸಿಕೊಳ್ಳುವ ಮೂಲಕ ಸಂತೋಷದಿಂದ ಬಾಳಬೇಕು ಎಂದು ಹಾರೈಸಿದರು.

ಕಾಲೇಜಿನ ಆಡಳಿತಾಧಿಕಾರಿ ಶಂಕ್ರಯ್ಯ ಹಿರೇಮಠ ಸಹ ಪ್ರಶಿಕ್ಷಣಾರ್ಥಿಗಳನ್ನುದ್ದೇಶಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಎಸ್.ವಿ.ವಿ.ಕೆ ಟ್ರಸ್ಟ್(ರಿ) ಉಪಾಧ್ಯಕ್ಷ ವಿಶ್ವರಾಧ್ಯ ಸ್ವಾಮಿ, ಉಪನ್ಯಾಸಕರಾದ ಬಸವಲಿಂಗ, ನಿರ್ಮಲ ಮಟ್ಟೂರು ಮತ್ತು ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು. ವಿರೂಪಾಕ್ಷಯ್ಯ ಸಾಲಿಮಠ ಕಾರ್ಯಕ್ರಮ ನಿರೂಪಿಸಿದರು, ಬಸ್ಸಯ್ಯ ಸ್ವಾಮಿ ಸ್ವಾಗತಿಸಿ, ನಿರ್ಮಲ ಮಟ್ಟೂರು ವಂದನಾರ್ಪಣೆ ಮಾಡಿದರು.

# ಗಾಂಜಾ ಸಾಗಾಟ ಮಾಡುತ್ತಿದ್ದವನ ವಶಕ್ಕೆ ಪಡೆದ ಖಾಕಿ ಪಡೆ : 14.87 ಕೆಜಿ ಗಾಂಜಾ ಜಪ್ತಿ



**ಔರಾದ್ ,ಅ.16–** ಬುಧವಾರ ತಾಲೂಕಿನ ಸಂತಪುರ ಪೊಲೀಸರು ಭರ್ಜರಿ ದಾಳಿ ನಡೆಸಿ ಸೊರಳ್ಳಿ ಕ್ರಾಸ್ ಹತ್ತಿರ ವ್ಯಕ್ತಿಯೋರ್ವ ದ್ವಿಚಕ್ರ ವಾಹನದ ಮೇಲೆ ಗಾಂಜಾ ಸಾಗಾಟ ಮಾಡುತ್ತಿರುವ ಮಾಹಿತಿ ತಿಳಿದು, ಪೊಲೀಸರು ವ್ಯಕ್ತಿಯ ಜೊತೆಗೆ 14 ಲಕ್ಷಕ್ಕೂ ಹೆಚ್ಚಿನ ಗಾಂಜಾವನ್ನು ಹಿಡಿದು ತೆಲಂಗಾಣದ ಖರಗುತ್ತಿ ಸಮೀಪದ ಗಂಗಾರಾಮ್ ತಾಂಡದ ಆರೋಪಿ ರಾಠೋಡ್ ಸುನಿಲ್ ಪೊ?ಮಾ ನಾಯಕ್ (30)ನನ್ನು ಬಂಧಿಸಿ , ಅವನಿಂದ 14,08700 ಲಕ್ಷ ರೂಗಳ ಮೌಲ್ಯದ 14.87 ಕೆಜಿ ಗಾಂಜಾ ದಸ್ತಗಿರಿ ಮಾಡಿಕೊಂಡು ಆತನ ಮೇಲೆ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ದಾಳಿಯಲ್ಲಿ ಸಂತಪೂರ ಪಿಎಸ್ಐನಂದ ಕುಮಾರ ಮೂಳೆ, ಗ್ರಾಮ ಆಡಳಿತಾಧಿಕಾರಿ ವಿಮಲಾ ಚಲವಾದಿ, ಅಶೋಕ್ ಹೆಗಡೆ, ಪೇದೆಗಳಾದ ಅರುಣ್ ಸಿಂಗ್, ರಾಮರೆಡ್ಡಿ, ಸುಭಾಷ್, ಗೌತಮ್, ವೆಂಕಟ್, ಕೊಟ್ರೇಶ್ ಇದ್ದರು.

# ಕೃಷ್ಣ ಮಂದಿರದಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಮಹೋತ್ಸವ



**ಕಲಬುರಗಿ: ಅ.16–**ವಿದ್ಯಾನಗರ ಬಡಾವಣೆಯ ಶ್ರೀ ಕೃಷ್ಣ ಮಂದಿರ ಹಾಗೂ ಹನುಮ ಭೀಮ ಮಧುರ ದೇವಸ್ಥಾನದಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ನಿಮಿತ್ಯ ವಿಶೇಷ ಪಾರಾಯಣ ಹಮ್ಮಿಕೊಳ್ಳಲಾಗಿತ್ತು.

ಶ್ರೀ ಲಕ್ಷ್ಮೀನಾರಾಯಣ, ಶ್ರೀ ಹಂಸ ನಾಮಕ, ಹರೇ ಶ್ರೀ ರಾಮ, ಶ್ರೀ ಜೈ ವೀರ ಹನುಮಾನ್, ಶ್ರೀ ಸತ್ಯ ಪ್ರಮೋದ ತೀರ್ಥ ಕೃಪಾಪೋಷಿತ ಪಾರಾಯಣ ಸಂಘ, ಗೀತಾ ಪಾರಾಯಣ ಸಂಘಗಳ ವತಿಯಿಂದ ವೆಂಕಟೇಶ ಸ್ತೋತ್ರ, ಶ್ರೀಮದ್ಭಗವದ್ಗೀತಾ, ಗೋಪಿಗೀತಮ್ ಪಾರಾಯಣ ಮಾಡಲಾಯಿತು. ಪ್ರಮುಖರಾದ ಡಾ. ಗೌತಮ್ ಜಹಾಗೀರದಾರ, ಕಿಶೋರ್ ದೇಶಪಾಂಡೆ, ಅನಿಲ್ ಕುಲಕರ್ಣಿ, ವಿನುತ ಜೋಶಿ, ವಿಶ್ವನಾಥ್ ಕುಲಕರ್ಣಿ, ರಾಮಾಚಾರ್ಯ ನಗನೂರು, ಡಾ. ಶ್ರೀನಿವಾಸ್ ಜಹಾಗೀರದಾರ, ಜಗನ್ನಾಥಾಚಾರ್ಯ ಸಗರ್, ಶಂಕರರಾವ್ ಸಿಂದಗಿಕರ್, ವಿಜಯಕುಮಾರ್ ಕುಲಕರ್ಣಿ, ಭೀಮಸೇನ್ ದೇಶಪಾಂಡೆ, ರವೀಂದ್ರ ದೇಶಪಾಂಡೆ, ವೆಂಕಟೇಶ ಜೋಶಿ, ಪ್ರವೀಣ್ ಓಂಕಾರ್. ರಾಮದಾಸ್, ಸಮೀರ್ ಕುಲಕರ್ಣಿ, ರವೀಂದ್ರ ದೇಶಪಾಂಡೆ, ಅಪ್ಪಾರಾವ್ ಟಕ್ಕಳಕಿ, ಆರ್ ಬಿ ಜೋಶಿ ಇತರರಿದ್ದರು.

# ಅಗ್ನಿ ಅವಘಡ ಐವರು ಸಜೀವ ದಹನ

ಮೂರನೇ ಮಹಡಿಯಲ್ಲಿ ಮದನ್ ಕುಮಾರ್ ಪತ್ನಿ ಸಂಗೀತಾ, ಮಕ್ಕಳಾದ ವಿಹಾನ್ ಹಾಗೂ ನಿತೇಶ್ ವಾಸವಿದ್ದರು. ಘಟನೆಯಲ್ಲಿ ಎಲ್ಲರೂ ಸಾವನ್ನಪ್ಪಿದ್ದಾರೆ.

ಘಟನಾ ಸ್ಥಳಕ್ಕೆ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಭೇಟಿ ನೀಡಿ ಪರಿಶೀಲಿಸಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿ, ರಾತ್ರಿ 2.30ರ ಸುಮಾರಿಗೆ ಅಗ್ನಿ ಅವಗಢ ಸಂಭವಿಸಿದ ಮಾಹಿತಿ ಬಂದಿದೆ.ತಕ್ಷಣವೇ ಅಗ್ನಿಶಾಮಕ ದಳದವರು ನಮ್ಮ ಪೊಲೀಸರು ಪರಿಶೀಲನೆ ಮಾಡಿ ಪರಿಹಾರ ಕಾರ್ಯ ಕೈಗೊಂಡಿದ್ದಾರೆ. ನೆಲಮಹಡಿಯಲ್ಲಿರುವ ಗೋಡೌನ್ ನಲ್ಲಿ ಬೆಂಕಿ ಕಾಣಿಸಿಕೊಂಡಿತ್ತು. ನಂತರ ಅದು ಮೇಲಿನ ಮಹಡಿಗಳಿಗೆ ಆವರಿಸಿದೆ. ಬೆಂಕಿ ಹೊತ್ತಿಕೊಂಡ ಕೂಡಲೇ ಕಟ್ಟಡದಲ್ಲಿದ್ದ ಬಹುತೇಕ ಜನ ಓಡಿ ಹೋಗಿದ್ದಾರೆ. ಆದರೆ ಒಂದು ಕುಟುಂಬದ ನಾಲ್ವರು ಮತ್ತೊಬ್ಬ ಸೇರಿ ಐವರು ಕೆನ್ನಾಲಿಗೆಗೆ ಸಿಲುಕಿಕೊಂಡಿದ್ದಾರೆ.

ಮೃತದೇಹಗಳನ್ನು ಈಗಾಗಲೇ ಹೊರ ತೆಗೆಯಲಾಗಿದೆ. ಅಗ್ನಿಶಾಮಕ ಸಿಬ್ಬಂದಿ, ವಿಧಿವಿಜ್ಞಾನ ಪ್ರಯೋಗಾಲಯ ಅಧಿಕಾರಿಗಳು ಹಾಗೂ ನಮ್ಮ ರಕ್ಷಣಾ ತಂಡದವರು ಕಾರ್ಯಾಚರಣೆ ಕೈಗೊಂಡಿದ್ದರು ಎಂದು ಹೇಳಿದರು.

ಕೆ.ಆರ್ ಮಾರ್ಕೆಟ್ ಬಳಿಯ ನಗರ್ತಪೇಟೆಯ ವಾಣಿಜ್ಯ ಕಟ್ಟಡದಲ್ಲಿದ್ದ ಮಹಡಿ ಮನೆಯಲ್ಲಿ ತಡರಾತ್ರಿ ಬೆಂಕಿ ಕಾಣಿಸಿಕೊಂಡಿತ್ತು. ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ದೌಡಾಯಿಸಿದ್ದ ಅಗ್ನಿಶಾಮಕ ಸಿಬ್ಬಂದಿ ರಕ್ಷಣಾ ಕಾರ್ಯದಲ್ಲಿ ತೊಡಗಿ ಸ್ಥಳದಲ್ಲಿ ಅಂಬುಲೆನ್ಸ್‌ಗಳನ್ನ ನಿಯೋಜನೆ ಮಾಡಲಾಗಿತ್ತಾದರೂ ಅದರೊಳಗೆ ಸಿಲುಕಿದ್ದ ಎಲ್ಲರೂ ಸಜೀವ ದಹನಗೊಂಡಿದ್ದಾರೆ.

# ಆರ್‌ಎಸ್‌ಎಸ್ ಟೀಕಿಸುವನೈತಿಕತೆ ಸಿದ್ದರಾಮಯ್ಯರಿಗಿಲ್ಲ

**ಬೆಂಗಳೂರು, ಅ. 16–** ಪ್ರಧಾನಿ ನರೇಂದ್ರ ಮೋದಿಯವರು ನಿನ್ನೆ ಕೆಂಪುಕೋಟೆಯಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿದ ಸಂದರ್ಭದಲ್ಲಿ ಆರ್‌ಎಸ್‌ಎಸ್‌ನ್ನು ಹೊಗಳಿರುವುದನ್ನು ಟೀಕಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಕಿಡಿಕಾರಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪ್ರಧಾನಿ ಮೋದಿ ಹಾಗೂ ಆರ್‌ಎಸ್‌ಎಸ್‌ನ್ನು ಟೀಕಿಸುವ ನೈತಿಕತೆಯಾಗಲೀ, ಅರ್ಹತೆಯಾಗಲೀ ಸಿದ್ದರಾಮಯ್ಯನವರಿಗೆ ಇಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ವಿಜಯೇಂದ್ರ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಮೂಲ ಕಾಂಗ್ರೆಸ್ಸಿಗರಲ್ಲದ ನೀವು ತುರ್ತು ಪರಿಸ್ಥಿತಿಯನ್ನು ವಿರೋಧಿಸಿದ ರಾಜಕಾರಣದ ಹಿನ್ನೆಲೆಯಿಂದ ಬಂದವರು. ಕಾಂಗ್ರೆಸ್ ಪಕ್ಷದ ಪರ ಸಮರ್ಥನೆಗೆ ನಿಂತಿರುವುದು ಸ್ವಾತಂತ್ರ್ಯ ಚಳವಳಿಯ ಸಾರ್ಥಕತೆ ಸಾರಲು ಪ್ರಜಾಪ್ರಭುತ್ವವನ್ನು ಪುನಃ ಪ್ರತಿಷ್ಠಾಪಿಸಲು 70ರ ದಶಕದಲ್ಲಿ ತುರ್ತು ಪರಿಸ್ಥಿತಿಯ ವಿರುದ್ಧ ಹೋರಾಡಿದ ಹಲವಾರು ಮಹನೀಯರನ್ನು ಅವಮಾನಿಸಿದಂತೆ. ಸ್ವಾರ್ಥ ಹಾಗೂ ಅಧಿಕಾರ ರಾಜಕಾರಣಕ್ಕಾಗಿ ಕಾಂಗ್ರೆಸ್ ಸೇರಿರುವ ನೀವು ಸಂವಿಧಾನ, ಪ್ರಜಾಪ್ರಭುತ್ವದ ಬಗ್ಗೆ ಮಾತನಾಡುವ ಯಾವ ನೈತಿಕತೆಯನ್ನು ಉಳಿಸಿಕೊಂಡಿಲ್ಲ ಎಂದು ಹರಿಹಾಯ್ದಿದ್ದಾರೆ.

ಬ್ರಿಟೀಷರ ಗುಲಾಮಗಿರಿಯಿಂದ ದೇಶವನ್ನು ಮುಕ್ತಗೊಳಿಸಿದ, ಸ್ವಾತಂತ್ರ್ಯ ಸಂಗ್ರಾಮವನ್ನು ಇಂದಿಗೂ ಅಪಮಾನಿಸಿರುವ ಗುಲಾಮಿ ಸಂಸ್ಕೃತಿಯ ಕಾಂಗ್ರೆಸ್ ನೆರಳಿನಲ್ಲಿ ನಿಂತು ಮಾತನಾಡುತ್ತಿರುವ ನಿಮಗೆ ಆರ್‌ಎಸ್‌ಎಸ್ ಬಗ್ಗೆಯಾಗಲೀ, ಪ್ರಧಾನಿ ಬಗ್ಗೆಯಾಗಲೀ ಮಾತನಾಡುವ ಅರ್ಹತೆ ಇಲ್ಲ ಎಂದು ವಿಜಯೇಂದ್ರ ಟ್ವೀಟ್ ಮಾಡಿದ್ದಾರೆ.

ಸ್ವಾತಂತ್ರ್ಯೋತ್ಸವದ ವೇದಿಕೆಯಲ್ಲಿ ಆರ್‌ಎಸ್‌ಎಸ್ ಸಾಧನೆಯನ್ನು ಉಲ್ಲೇಖಿಸಿದ್ದು ಸಂವಿಧಾನದ ಅಪಚಾರ ಎಂದು ಹೇಳಿರುವ ಸಿದ್ದರಾಮಯ್ಯನವರೇ ತುರ್ತು ಪರಿಸ್ಥಿತಿಯಲ್ಲಿ ಸ್ವಾತಂತ್ರ್ಯವನ್ನು ಅನುಮಾನಿಸಿ ಸಂವಿಧಾನದ ಆಶಯವನ್ನು ಗಾಳಿಗೆ ತೂರಿ ಪ್ರಜಾಪ್ರಭುತ್ವದ ಕತ್ತು ಹಿಸುಕಿ ಸರ್ವಾಧಿಕಾರತನ ಮೆರೆದ ಕಾಂಗ್ರೆಸ್ ಪಕ್ಷವೇ ರಾಷ್ಟ್ರ ರಾಜಕೀಯದಲ್ಲಿ ಒಂದು ಬಹು ದೊಡ್ಡ ಕಪ್ಪುಚುಕ್ಕೆಯಾಗಿದೆ ಎಂದಿದ್ದಾರೆ.

ಆರ್‌ಎಸ್‌ಎಸ್ ರಾಜಕೀಯ ಪಕ್ಷವಲ್ಲ, ರಾಷ್ಟ್ರ ನಿರ್ಮಾಣಕ್ಕಾಗಿ ಜನ್ಮತಾಳಿ ಶತಮಾನ ಕಂಡ ವಿಶ್ವದ ಅತಿದೊಡ್ಡ ರಾಜಕೀಯೇತರ ಸಂಘಟನೆಯಾಗಿ ಸೇವೆ, ಸಮಾನತೆಯ ತತ್ವವನ್ನು ಅಳವಡಿಸಿಕೊಂಡು ದೇಶ ಕಟ್ಟುತ್ತಿರುವ ರಾಷ್ಟ್ರಭಕ್ತ ಸಂಘಟನೆ ಎಂದು ಅವರು ತಿಳಿಸಿದ್ದಾರೆ.



ಜಾತಿ ರಹಿತ ಸಮಾಜ ಕಟ್ಟುವ ಸಂಘದ ತ್ಯಾಗ ಸಮರ್ಪಣೆಯ ಅಸಂಖ್ಯಾತ ಕಾರ್ಯಕರ್ತರ ಕ್ರಿಯಾಶೀಲತೆಯನ್ನು ಕಂಡು ಮಹಾತ್ಮಗಾಂಧೀಜಿಯವರು ಆರ್‌ಎಸ್‌ಎಸ್‌ನ್ನು ಪ್ರಶಂಸಿಸಿದ ಉಲ್ಲೇಖ ಇತಿಹಾಸ ಪುಟದಲ್ಲಿದೆ. ಚೀನಾ ಯುದ್ಧದ ಸಂದರ್ಭದಲ್ಲಿ ದೇಶ ಸೇವೆಗೆ ನಿಂತ ವೀರ ಯೋಧರ ಸೇವೆಗಾಗಿ ತನ್ನನ್ನು ತೊಡಗಿಸಿಕೊಂಡ ಹೆಮ್ಮೆಯ ಸಂಘಟನೆ. ಈ ಹಿನ್ನೆಲೆಯಲ್ಲಿಯೇ ಅಂದಿನ ಪ್ರಧಾನಿ ನೆಹರುರವರು ಆರ್‌ಎಸ್‌ಎಸ್ ಸೇವೆಯನ್ನು ಇಡೀ ದೇಶವೇ ಗುರುತಿಸಲಿ ಎಂಬ ಪ್ರಶಂಸೆಯ ಸಂಕೇತವಾಗಿ ಗಣರಾಜ್ಯೋತ್ಸವದ ಪೆರೇಡ್‌ನಲ್ಲಿ ಸಂಘವನ್ನು ಭಾಗವಹಿಸಲು ಆಹ್ವಾನಿಸಿದ್ದರು ಎಂದು ಅವರು ಟ್ವೀಟ್‌ನಲ್ಲಿ ನೆನಪು ಮಾಡಿಕೊಂಡಿದ್ದಾರೆ.

ಆರ್‌ಎಸ್‌ಎಸ್‌ನ್ನು ಪ್ರಧಾನಿ ಮೋದಿಯವರು ಹೊಗಳಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಏಕೆ ಇಷ್ಟೊಂದು ವಿಚಲಿತರಾಗಿದ್ದೀರಿ, ಸ್ವಾತಂತ್ರ್ಯ ಚಳವಳಿಯ ಉದ್ದೇಶವನ್ನು ಸಾರ್ಥಕಗೊಳಿಸಿ ಮುನ್ನಡೆಯುತ್ತಿರುವ ಆರ್‌ಎಸ್‌ಎಸ್‌ನ್ನು ಪ್ರಶಂಸಿಸಿರುವುದು ಸಮಯೋಚಿತವಾಗಿ ಎಂದು ಹೇಳಿದ್ದಾರೆ.

ಈ ದೇಶದಲ್ಲಿ ಲಕ್ಷಾಂತರ ಜನರ ತ್ಯಾಗ, ಹೋರಾಟದ ಫಲವಾಗಿ ಭಾರತ ಗಳಿಸಿಕೊಂಡ ಸ್ವಾತಂತ್ರ್ಯವನ್ನು ದೇಶದ ಅಭಿವೃದ್ಧಿಗೆ, ಸುರಕ್ಷತೆಗೆ ಕಾಂಗ್ರೆಸ್ ಎಂದೂ ಬಳಸಿಕೊಳ್ಳಲಿಲ್ಲ. ತನ್ನ ಆಡಳಿತ ಕಾಲದಲ್ಲಿ ದೇಶದಲ್ಲಿ ಭಯೋತ್ಪಾದಕ ಶಕ್ತಿಗಳು ತಲೆ ಎತ್ತಲು ಭ್ರಷ್ಟಾಚಾರದ ಹಗರಣಗಳು ಈ ದೇಶವನ್ನು ಕಿತ್ತು ತಿನ್ನುವ ಪರಿಸ್ಥಿತಿಗೆ ತಳ್ಳಿದ್ದು ಕಾಂಗ್ರೆಸ್ ಕೊಡುಗೆಯಾಗಿದೆ ಎಂದು ವಿಜಯೇಂದ್ರ ಟೀಕಿಸಿದ್ದಾರೆ.

# ಉಚಿತ ಬಸ್ ಪ್ರಯಾಣ, ಆಂಧ್ರದಲ್ಲೂ ಜಾರಿ

**ಅಮರಾವತಿ, ಆ,16–** ಕರ್ನಾಟಕದಲ್ಲಿ ರಾಜ್ಯಾದ್ಯಂತ ಮಹಿಳೆಯರಿಗೆ ರಾಜ್ಯ ಸರ್ಕಾರಿ ಬಸ್‌ಗಳಲ್ಲಿ ಉಚಿತ ಪ್ರಯಾಣಕ್ಕೆ "ಶಕ್ತಿ" ಯೋಜನೆಯಡಿ ಅವ ಕಾಶ ಮಾಡಿಕೊಟ್ಟಿರುವ ಬೆನ್ನಲ್ಲೇ ಆಂದ್ರಪ್ರದೇಶದಲ್ಲಿಯೂ ಮಹಿಳೆಯರಿಗೆ ಉಚಿತ ಪ್ರಯಾಣಕ್ಕೆ 'ಸ್ತ್ರೀ ಶಕ್ತಿ' ಯೋಜ ನೆಗೆ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಚಾಲನೆ ನೀಡಿದ್ದಾರೆ.



ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಮತ್ತು ಐಟಿ ಸಚಿವ ನಾರಾ ಲೋಕೇಶ್ ಸೇರಿದಂತೆ ಹಿರಿಯ ಅಧಿಕಾರಿಗಳು ಮಹಿಳೆಯ ಜೊತೆ ಬಸ್‌ನಲ್ಲಿ ಸಂಚಾರ ಆರಂಭಿಸುವ ಮೂಲಕ ಸ್ತ್ರೀ ಶಕ್ತಿ ಯೋಜನೆಗೆ ಅಧಿಕೃತವಾಗಿ ಚಾಲನೆ ನೀಡಿದರು

ಆಂಧ್ರಪ್ರದೇಶದ ನಿವಾಸಿಗಳಿಗೆ ರಾಜ್ಯಾದ್ಯಂತ ರಾಜ್ಯ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಯುವತಿಯರು, ಮಹಿಳೆಯರು ಮತ್ತು ಟ್ರಾನ್ಸ್‌ಜೆಂಡರ್ ವ್ಯಕ್ತಿಗಳಿಗೆ ಪ್ರಯಾಣಕ್ಕೆ ಅವಕಾಶ ಮಾಡಿಕೊಡಲಾಗಿದೆ. ಇದರಿಂದ ರಾಜ್ಯದ ಸುಮಾರು 2.62 ಕೋಟಿ ಮಹಿಳೆಯರು ಈ ಯೋಜನೆಯ ಪ್ರಯೋಜನ ಪಡೆಯುವ ನಿರೀಕ್ಷೆಯಿದೆ.

ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು "ಸ್ತ್ರೀ ಶಕ್ತಿ" ಯೋಜನೆಗೆ ಚಾಲನೆ ನೀಡಿ, ಚುನಾವಣಾ ಸಮಯದಲ್ಲಿ ರಾಜ್ಯದ ಮಹಿಳೆಯರಿಗೆ ನೀಡಿದ ಭರವಸೆಯಂತೆ ಸ್ತ್ರೀ ಶಕ್ತಿ ಯೋಜನೆ ಜಾರಿಗೆ ತರಲಾಗಿದೆ ಎಂದು ತಿಳಿಸಿದ್ದಾರೆ

ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು, ಮಹಿಳೆಯರ ಶಿಕ್ಷಣ, ಉದ್ಯೋಗ ಮತ್ತು ಆರೋಗ್ಯ ಸೇವೆಗೆ ಪ್ರವೇಶ ಹೆಚ್ಚಿಸುವುದು ಈ ಉಪಕ್ರಮದ ಗುರಿಯಾಗಿದೆ ಎಂದಿದ್ದಾರೆ

2024 ರ ವಿಧಾನಸಭೆ ಚುನಾವಣೆಯ ಸಮಯದಲ್ಲಿ ರಾಜ್ಯದ ಜನರಿಗೆ ನೀಡಿದ್ದ 6 ಪ್ರಮುಖ ಯೋಜನೆಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣವೂ ಒಂದಾಗಿದೆ, 19 ರಿಂದ 59 ವರ್ಷ ವಯಸ್ಸಿನ ಪ್ರತಿ ಮಹಿಳೆಗೆ ಮಾಸಿಕ 1,500 ರೂ. ನೆರವು, ಯುವಕರಿಗೆ 20 ಲಕ್ಷ ಉದ್ಯೋಗ ಅಥವಾ ಮಾಸಿಕ 3,000 ರೂ. ನಿರುದ್ಯೋಗ ಭತ್ಯೆ ಮತ್ತು ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೇರಿವೆ ಅವುಗಳನ್ನು ಹಂತ ಹಂತವಾಗಿ ಜಾರಿ ಮಾಡುವುದಾಗಿ ಪ್ರಕಟಿಸಿದ್ದಾರೆ

ಶಾಲೆಗೆ ಹೋಗುವ ಪ್ರತಿ ಮಗುವಿಗೆ ವಾರ್ಷಿಕ 15,000 ರೂ. ಪ್ರತಿ ಮನೆಗೆ ಮೂರು ಉಚಿತ ಗ್ಯಾಸ್ ಸಿಲಿಂಡರ್‌ಗಳು, ಮತ್ತು ಪ್ರತಿ ರೈತನಿಗೆ ವಾರ್ಷಿಕ 20,000 ರೂ. ಆರ್ಥಿಕ ನೆರವು ನೀಡಲಾಗುವುದು ಎಂದು ತಿಳಿಸಿದ್ದಾರೆ

ಸ್ತ್ರೀ ಶಕ್ತಿ ಯೋಜನೆಯು ಫಲಾನುಭವಿಗಳು ಆಂಧ್ರಪ್ರದೇಶ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ಸೇವೆಗಳ ಐದು ವಿಭಾಗಗಳಲ್ಲಿ ರಾಜ್ಯಾದ್ಯಂತ ಪ್ರಯಾಣಿಸಲು ಅನುವು ಮಾಡಿಕೊ ಡುತ್ತದೆ. ರಾಜ್ಯದಲ್ಲಿ ಸುಮಾರು 2.62 ಕೋಟಿ ಮಹಿಳೆಯರು ಈ ಯೋಜನೆಯ ಪ್ರಯೋಜನ ಪಡೆಯುವ ನಿರೀಕ್ಷೆಯಿದೆ.

ಆಂದ್ರಪ್ರದೇಶ ಸಾರಿಗೆ ಸಂಸ್ಥೆಯ ಒಟ್ಟು 11,449 ಬಸ್‌ಗಳಲ್ಲಿ, ಶೇಕಡಾ 74 ರಷ್ಟು ಬಸ್‌ಗಳು ಸ್ತ್ರೀ ಶಕ್ತಿ ಅಡಿಯಲ್ಲಿ ಯುವತಿಯರು, ಮಹಿಳೆಯರು ಮತ್ತು ಟ್ರಾನ್ಸ್‌ಜೆಂಡರ್ಸ್‌ಗಳಿಗೆ ಉಚಿತ ಪ್ರಯಾಣಕ್ಕೆ ಅವಕಾಶ ಮಾಡಿಕೊಡಲಾಗಿದೆ

# ಸಕಲ ಸರಕಾರಿ ಗೌರವಗಳೊಂದಿಗೆ ಪಂಚಭೂತಗಳಲ್ಲಿ ಲೀನರಾದ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ

**ಕಲಬುರಗಿ,ಅ.16–**ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿ ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಅವರ ಪಾರ್ಥೀವ ಶರೀರವನ್ನು ಅವರ ತಂದೆ ಹಾಗೂ ಸಂಸ್ಥಾನದ 7ನೇ ಪೀಠಾಧಿಪತಿಗಳಾದ ಲಿಂಗೈಕ್ಯ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರ ಸಮಾಧಿಯ ಬಲಭಾಗದಲ್ಲಿ ಸಂಪೂರ್ಣ ಸರಕಾರಿ ಗೌರವಗ ಳೊಂದಿಗೆ ಅಂತ್ಯಸಂಸ್ಕಾರ ಮಾಡಲಾಯಿತು. ಶರಣಬಸವೇಶ್ವರ ಪುಣ್ಯಕ್ಷೇತ್ರವು ಈ ಪ್ರದೇಶದ ಶೈಕ್ಷಣಿಕ ಸಬಲೀಕರಣಕ್ಕಾಗಿ ಶ್ರಮಿಸಿದ ಈ ಯುಗದ ಅಂತ್ಯಕ್ಕೆ ನಾಂದಿಹಾಡಿದಂತಾಯಿತು.



ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರು ಬೆಂಗಳೂರಿನಿಂದ ಕಲಬುರಗಿಗೆ ವಿಶೇಷ ವಿಮಾನದಲ್ಲಿ ಆಗಮಿಸಿ, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಜಿಲ್ಲಾಧಿಕಾರಿ ಶ್ರೀಮತಿ ಫೌಜಿಯಾ ತರನ್ನುಮ್ ಹಾಗೂ ಇತರ ಹಿರಿಯ ಅಧಿಕಾರಿಗಳು ಹಾಗೂ ಅನೇಕ ರಾಜಕಾರಣಿಗಳ ಸಮ್ಮುಖದಲ್ಲಿ, ರಾಜ್ಯ ಸರ್ಕಾರದ ಪರವಾಗಿ ಡಾ. ಅಪ್ಪಾಜಿ ಅವರಿಗೆ ನಮಸ್ಕರಿಸಿ ಆಶೀರ್ವಾದ ಪಡೆದು, ಅಪ್ಪಾಜಿಯವರಿಗೆ ಸರಕಾರದ ವತಿಯಿಂದ ಗೌರವ ಸೂಚಕವಾಗಿ ಗಾಳಿಯಲ್ಲಿ 21 ಗುಂಡು ಹಾರಿಸಲಾಯಿತು. ಹಜರತ್ ಖ್ವಾಜಾ ಬಂದನವಾಜ್ ದರ್ಗಾದ ಸಜ್ಜದಾ ನಶೀನ್, ಸೈಯದ್ ಮುಹಮ್ಮದ್ ಅಲಿ ಅಲ್–ಹುಸೇನಿ ಹಾಗೂ ಸಣ್ಣ ಕೈಗಾರಿಕೆಗಳ ರಾಜ್ಯ ಸಚಿವ ಶ್ರೀ ಶರಣಬಸಪ್ಪಗೌಡ ದರ್ಶನಾಪುರ ಸೇರಿದಂತೆ ಅನೇಕ ರಾಜಕೀಯ ಪ್ರಮುಖರು ಅಪ್ಪಾಜಿಯವರಿಗೆ ಪುಷ್ಪ ನಮನ ಸಲ್ಲಿಸಿದರು.

ಡಾ. ಅಪ್ಪಾಜಿಯವರ ಕುಟುಂಬ ಸದಸ್ಯರು, ವಿಶೇಷವಾಗಿ ಅವರ ಪತ್ನಿ ಹಾಗೂ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಚೇರ್‌ಪರ್ಸನ್ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ, ಅವರ ಚಿರಂಜೀವಿ ಹಾಗೂ ಸಂಸ್ಥಾನದ 9ನೇ ಪೀಠಾಧಿಪತಿ ಪೂಜ್ಯ ಚಿರಂಜೀವಿ ದೊಡ್ಡಪ್ಪ ಅಪ್ಪಾಜಿ ಮತ್ತು ಅವರ ಮೂವರು ಹೆಣ್ಣುಮಕ್ಕಳಾದ ಕು. ಶಿವಾನಿ ಎಸ್. ಅಪ್ಪ, ಕು. ಭವಾನಿ ಎಸ್. ಅಪ್ಪ, ಮತ್ತು ಕು. ಮಹೇಶ್ವರಿ ಎಸ್. ಅಪ್ಪ ಅವರು ಸಮಾಧಿ ಸ್ಥಳದಲ್ಲಿ ದುಃಖಿತರಾಗಿ ಕಣ್ಣೀರಿಡುತ್ತಿದ್ದರು. ವೀರಶೈವ ಲಿಂಗಾಯತ ಮಠಗಳ ಧಾರ್ಮಿಕ ಮುಖ್ಯಸ್ಥರು ಸಮಾಧಿ ಸ್ಥಳದಲ್ಲಿ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿದರು.

ಎಲ್ಲಾ ಸಾಂಪ್ರದಾಯಿಕ ಪದ್ಧತಿಗಳ ಪ್ರಕಾರ, ಡಾ. ಅಪ್ಪಾಜಿಯವರಿಗೆ ಐದು ಬಾರಿ ಪೂಜೆ ಸಲ್ಲಿಸಿ, ಅಪ್ಪಾಜಿಯವರ ಪಾರ್ಥಿವ ಶರೀರವನ್ನು ಹೂವಿನಿಂದ ಅಲಂಕರಿಸಿದ ಪಲ್ಲಕ್ಕಿಯಲ್ಲಿರಿಸಿ, ಶರಣಬಸವೇಶ್ವರ ದೇವಾಲಯದ ಸುತ್ತಲೂ ಐದು ಬಾರಿ ಪ್ರದಕ್ಷಿಣೆ ಹಾಕಿ ಸಮಾಧಿ ಸ್ಥಳಕ್ಕೆ ಕರೆ ತರಲಾಯಿತು.

ಪಲ್ಲಕ್ಕಿಯಲ್ಲಿರುವ ಪಾರ್ಥಿವ ಶರೀರವನ್ನು ಸಮಾಧಿ ಸ್ಥಳದ ಬಳಿ ತರುವಾಗ, ಹಾರಕೂಡ್ ಮಠದ ಶ್ರೀ ಚೆನ್ನವೀರ ಶಿವಾಚಾರ್ಯರು ಮತ್ತು ಸಂಸ್ಥಾನದ 9ನೇ ಪೀಠಾಧಿಪತಿ ಪೂಜ್ಯ ಚಿರಂಜೀವಿ ದೊಡ್ಡಪ್ಪ ಅಪ್ಪಾಜಿ ಅವರು ಸಮಾಧಿ ಸ್ಥಳದಲ್ಲಿ ಪೂಜೆ ಸಲ್ಲಿಸಿದರು ಮತ್ತು ಧಾರ್ಮಿಕ ಸ್ವಾಮೀಜಿಗಳು ವಚನಗಳು ಮತ್ತು ವೇದಗಳ ಸ್ತೋತ್ರಗಳನ್ನು ಪಠಿಸುತ್ತಿದ್ದಾಗ ಪೂಜ್ಯ ಡಾ. ಅಪ್ಪಾಜಿಯವರ ಪಾರ್ಥಿವ ಶರೀರವನ್ನು ನಿಧಾನವಾಗಿ ಸಮಾಧಿ ಸ್ಥಳದಲ್ಲಿ ಇಡಲಾಯಿತು. ಧಾರ್ಮಿಕ ಸ್ತುತಿಗೀತೆಗಳನ್ನು ಪಠಿಸುತ್ತಿದ್ದ ಸ್ವಾಮೀಜಿಗಳು, ಡಾ. ಅಪ್ಪಾಜಿಯವರ ಮೃತದೇಹದ ಕೊರಳಿನಿಂದ "ಲಿಂಗ" ಹಾಗೂ ಶಿರದ ಮೇಲೆ ಧರಿಸುತ್ತಿದ್ದ ಪೇಠವನ್ನು ತೆಗೆದು ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ್ ಅವರಿಗೆ ಹಸ್ತಾಂತರಿಸಿದರು. ಅವರು ಪ್ರತಿಯಾಗಿ ಪೂಜ್ಯ ಅಪ್ಪಾಜಿ ಧರಿಸಿದ್ದ ಶಿರಸ್ತ್ರಾಣ ಮತ್ತು "ಲಿಂಗ"ವನ್ನು ಹಾರಕೂಡ ಮಠದ ಪೂಜ್ಯ ಚೆನ್ನವೀರ ಶಿವಾಚಾರ್ಯರು ಅವರಿಗೆ ಹಸ್ತಾಂತರಿಸಿದರು. ಅವರು ಸಂಸ್ಥಾನದ 9ನೇ ಪೀಠಾಧಿಪತಿ ಪೂಜ್ಯ ಚಿರಂಜೀವಿ ದೊಡ್ಡಪ್ಪ ಅಪ್ಪಾಜಿ ಅವರಿಗೆ ಶಿರಸ್ತ್ರಾಣ ಮತ್ತು ಲಿಂಗ ಎರಡನ್ನೂ ಹಸ್ತಾಂತರಿಸಿದರು.

ರಾಜ್ಯ ಸರಕಾರದ ಪರವಾಗಿ ಉಪಮುಖ್ಯಮಂತ್ರಿ ಶ್ರೀ ಡಿ. ಕೆ. ಶಿವಕುಮಾರ್ ಮತ್ತು ಸಚಿವ ಶ್ರೀ ಪ್ರಿಯಾಂಕ್ ಖರ್ಗೆ ಅವರು ಅಗಲಿದ ಡಾ. ಅಪ್ಪಾಜಿಯವರ ಆತ್ಮಕ್ಕೆ ಗೌರವ ಸಲ್ಲಿಸಿದರು. ಶಿಕ್ಷಣ ಮತ್ತು ಸಾಮಾಜಿಕ ಸೇವೆಯ ಕ್ಷೇತ್ರದಲ್ಲಿ ಡಾ. ಅಪ್ಪಾಜಿಯವರು ನೀಡಿದ ಕೊಡುಗೆಯನ್ನು ಸ್ಮರಿಸಿದರು. ರಾಜ್ಯ ಸರಕಾರದ ಪರವಾಗಿ ಡಾ. ಅಪ್ಪಾಜಿ ಅವರಿಗೆ ಗೌರವ ಸಲ್ಲಿಸಲು ವಿಶೇಷವಾಗಿ ಕಲಬುರಗಿಗೆ ಬಂದಿದ್ದೇನೆ ಹಾಗೂ ಅಪ್ಪಾಜಿಯವರ ಆಶೀರ್ವಾದ ಪಡೆದಿದ್ದು ನನ್ನ ಸೌಭಾಗ್ಯವೆಂದು ಎಂದು ಹೇಳಿದರು. ಶರಣಬಸವೇಶ್ವರ ಸಂಸ್ಥಾನವು ಈ ಪ್ರದೇಶದ ಶೈಕ್ಷಣಿಕ ಸಬಲೀಕರಣದಲ್ಲಿ ಪ್ರಮುಖ ಪಾತ್ರ ವಹಿಸಿದೆ ಡಿ. ಕೆ. ಶಿವಕುಮಾರ್ ಹೇಳಿದರು.ಪೂಜ್ಯ ಡಾ. ಅಪ್ಪಾಜಿಯವರ ಪಾರ್ಥಿವ ಶರೀರಕ್ಕೆ ಗೌರವ ಸಲ್ಲಿಸಲು ವಿಶೇಷ ವಿಮಾನದಲ್ಲಿ ಕಲಬುರಗಿಗೆ ಆಗಮಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಶ್ರೀ ಬಿ. ವೈ. ವಿಜಯೇಂದ್ರ ಅವರು, ಡಾ. ಅಪ್ಪಾಜಿಯವರ ಪಾರ್ಥಿವ ಶರೀರಕ್ಕೆ ಪುಷ್ಪ ನಮನ ಸಲ್ಲಿಸಿದ ನಂತರ ತಮ್ಮ ಸಂಕ್ಷಿಪ್ತ ನುಡಿಗಳಲ್ಲಿ, ಡಾ. ಅಪ್ಪಾಜಿಯವರ ಶಿಕ್ಷಣ ಮತ್ತು ಸಾಮಾಜಿಕ ಸೇವೆಯ ಕ್ಷೇತ್ರದಲ್ಲಿ ಅವರ ಕೊಡುಗೆಯನ್ನು ಹೋಲಿಸಲಾಗದು ಮತ್ತು ಕರ್ನಾಟಕ ಹಾಗೂ ದೇಶವು ಒಬ್ಬ ಮಹಾನ್ ಆತ್ಮವನ್ನು ಕಳೆದುಕೊಂಡಿದೆ ಎಂದು ಹೇಳಿದರು. ಅವರ ತಂದೆ ಬಿ.ಎಸ್. ಯಡಿಯೂರಪ್ಪ ಅವರು ಡಾ. ಅಪ್ಪಾಜಿಯವರ ಕುಟುಂಬಕ್ಕೆ ತಮ್ಮ ಆಳವಾದ ಸಂತಾಪವನ್ನು ವ್ಯಕ್ತಪಡಿಸಿದ್ದಾರೆಂದು ಹೇಳಿದರು. ಪೂಜ್ಯ ಅಪ್ಪಾಜಿಯವರ ಅಂತಿಮ ಸಂಸ್ಕಾರದಲ್ಲಿ ಭಾಗವಹಿಸಿದ ಪ್ರಮುಖರಲ್ಲಿ ಅರಣ್ಯ ಸಚಿವ ಈಶ್ವರ್ ಖಂಡ್ರೆ, ಶಾಸಕರಾದ ಶ್ರೀ ಬಿ ಆರ್ ಪಾಟೀಲ್, ಶ್ರೀ ಅಲ್ಲಮಪ್ರಭು ಪಾಟೀಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಧರ್ಮಸ್ಥಳ ಅನಾಮಿಕನ ಪ್ರಕರಣ : ಎಸ್‌ಐಟಿಯಿಂದ ಮಧ್ಯಂತರ ವರದಿ



**ಬೆಂಗಳೂರು, ಆ.16–** ಧರ್ಮಸ್ಥಳದ ಸುತ್ತಮುತ್ತ ಶವಗಳನ್ನು ಹೂತಿಡಲಾಗಿದೆ ಎಂದು ಹೇಳಿದ್ದ ಅನಾಮಿಕನ ಪ್ರಕರಣದ ಕುರಿತು ವಿಧಾನಸಭೆಯಲ್ಲಿ ಉತ್ತರ ನೀಡಬೇಕಿರುವುದರಿಂದ ಮಧ್ಯಂತರ ವರದಿ ನೀಡಲು ಎಸ್‌ಐಟಿ ಅಧಿಕಾರಿಗಳು ತನಿಖೆಯನ್ನು ಮತ್ತಷ್ಟು ಚುರುಕುಗೊಳಿಸಿದ್ದಾರೆ.

ಅನಾಮಿಕ ವ್ಯಕ್ತಿಯ ಹೇಳಿಕೆ ಆಧರಿಸಿ ಎಸ್‌ಐಟಿ ತನಿಖೆ ನಡೆಸಲು ರಾಜ್ಯ ಸರ್ಕಾರ ಕಳೆದ ಜು.20 ರಂದು ಹಿರಿಯ ಅಧಿಕಾರಿ ಪ್ರಣವ್‌ಮೊಹಾಂತಿ ನೇತೃತ್ವದಲ್ಲಿ ತಂಡ ರಚಿಸಿತ್ತು. ಅಂದಿನಿಂದಲೂ ಕಾರ್ಯ ಪ್ರವೃತ್ತರಾಗಿರುವ ಎಸ್‌ಐಟಿ ಅಧಿಕಾರಿಗಳು ನಾನಾ ರೀತಿಯ ತನಿಖೆಗಳನ್ನು ನಡೆಸುತ್ತಿದ್ದಾರೆ.

ಸುಮಾರು 20 ದಿನಗಳಿಂದಲೂ ಒಟ್ಟು 17 ಸ್ಥಳಗಳಲ್ಲಿ ಅಗೆದು ಶವ ಅಥವಾ ಕಳೇಬರಗಳಿಗಾಗಿ ಶೋಧ ನಡೆಸಿದ್ದಾರೆ. ಕೆಲವು ಸ್ಥಳಗಳಲ್ಲಿ ಸಣ್ಣ–ಪುಟ್ಟ ಮೂಳೆಗಳು ಪತ್ತೆಯಾಗಿದ್ದು, ಇನ್ನೂ ಕೆಲವು ಕಡೆ ಗುರುತಿನ ಚೀಟಿಯಂತಹ ಮೂಲಭೂತ ದಾಖಲೆಗಳು ದೊರೆತ್ತಿವೆ. ಆದರೆ ಅವುಗಳಿಗೂ ಮಾಸ್ಕ್‌ಮ್ಯಾನ್ ಮಾಡಿರುವ ಆರೋಪಗಳಿಗೂ ಹೆಚ್ಚಿನ ಸಂಬಂಧವಿಲ್ಲ ಎಂದು ತಿಳಿದು ಬಂದಿದೆ.

ಈ ಹಿಂದೆ ಧರ್ಮಸ್ಥಳದಲ್ಲಿ ನೈರ್ಮಲೀಕರಣ ಕೆಲಸ ಮಾಡುತ್ತಿದ್ದ 48 ವರ್ಷದ ಅನಾಮಿಕ ವ್ಯಕ್ತಿ, ತಾನು 1995 ರಿಂದ 2014ರ ವರೆಗೂ ಹಲವಾರು ಶವಗಳನ್ನು ಧರ್ಮಸ್ಥಳದ ಸುತ್ತಮುತ್ತ ನೇತ್ರಾವತಿ ನದಿಯ ದಂಡೆಗಳಲ್ಲಿ ಹೂತಿಟ್ಟಿದ್ದಾಗಿ ಹೇಳಿದ್ದ. ಆ ರೀತಿ ಸಂಸ್ಕಾರ ಮಾಡಲಾದ ಕಳೇಬರಗಳಲ್ಲಿ ಹೆಚ್ಚಿನದಾಗಿ ಮಹಿಳೆಯರು ಮತ್ತು ಬಾಲಕಿಯರ ಶವಗಳಿದ್ದವು ಎಂದಿದ್ದ.

ಲೈಂಗಿಕ ದೌರ್ಜನ್ಯವೆಸಗಿ ಬಳಿಕ, ಕೊಲೆ ಮಾಡಲಾಗಿತ್ತು ಎಂದು ಆರೋಪಿ ತಿಳಿಸಿದ್ದು, ಭಾರೀ ಚರ್ಚೆಗೆ ಗ್ರಾಸವಾಗಿತ್ತು. ಇದು ರಾಷ್ಟ್ರಮಟ್ಟದಲ್ಲೂ ಗಮನ ಸೆಳೆದಿತ್ತು. ಅನಾಮಧೇಯನ ಆರೋಪದ ಬೆನ್ನಲ್ಲೆ ಅನನ್ಯಭಟ್, ಪದಲತಾ, ಸುಜಾತ ಭಟ್ ಎಂಬ ಯುವತಿಯರ ನಾಪತ್ತೆ ಪ್ರಕರಣಗಳು ಮುನ್ನೆಲೆಗೆ ಬಂದವು.

ಅನಾಮಧೇಯ ವ್ಯಕ್ತಿ ಆರಂಭದಲ್ಲಿ 13 ಸ್ಥಳಗಳನ್ನು ಗುರುತಿಸಿದ್ದ ನಂತರ ಹೆಚ್ಚುವರಿ 4 ಜಾಗಗಳನ್ನು ತೋರಿಸಿ ಅಗೆಯಲು ಹೇಳಿದ್ದ. ಒಟ್ಟು 17 ಜಾಗಗಳನ್ನು ಎಸ್‌ಐಟಿ ಅಧಿಕಾರಿಗಳು ಅಗೆದಿದ್ದಾರೆ. ಅದರೂ ಯಾವುದೇ ಮಹತ್ವದ ಸುಳಿವು ದೊರಕಿಲ್ಲ ಎಂದು ತಿಳಿದು ಬಂದಿದೆ. ಕೊನೆಗೆ ಅನಾಮಧೇಯನ ಒತ್ತಾಯದ ಮೇರೆಗೆ ಗ್ರೌಂಡ್‌ಪೆನೆಟ್ರೇಟಿಂಗ್ ರಾಡರ್ (ಜಿಪಿಆರ್)ಬಳಸಿಯೂ ಅನ್ವೆ?ಷಣೆ ನಡೆಸಲಾಗಿದೆ.

ಇದೆಲ್ಲದರ ಬಳಿಕ ಈಗ ಅನಾಮಧೇಯನ ಹೇಳಿಕೆಗಳ ಬಗ್ಗೆಯೇ ಅನುಮಾನಗಳು ಸೃಷ್ಟಿಯಾಗಿವೆ. ಪೊಲೀಸರು ಆತ ಮೊದಲು ತಂದಿಟ್ಟಿದ್ದ ತಲೆ ಬುರುಡೆಯಿಂದ ಈಗ ತನಿಖೆ ಆರಂಭಿಸಿದ್ದಾರೆ. ಎಸ್?ಐಟಿ ತನಿಖೆಗೂ ಮೊದಲೇ ಆರೋಪಿ ಒಂದು ತಲೆ ಬುರುಡೆಯನ್ನು ತಂದು, ಇದು ಒಬ್ಬ ಬಾಲಕಿಯದು. ಆಕೆಯ ಮೇಲೆ ಅತ್ಯಾಚಾರ ಮಾಡಿ ಕೊಲೆ ಮಾಡಲಾಗಿತ್ತು. ಶಾಲಾ ಬ್ಯಾಗ್‌ನ ಸಹಿತ ನಾನೇ ಆಕೆಯ ಶವವನ್ನು 2010ರಲ್ಲಿ ಹೂತಿಟ್ಟಿದ್ದಾಗಿ ಹೇಳಿದ್ದ. ನೇತ್ರಾವತಿ ದಂಡೆಯ ಬೋಳಿಯಾರ್ ಎಂಬ ಬಳಿ ಸಂಸ್ಕಾರ ಮಾಡಿದ್ದಾಗಿ ಅನಾಮಧೇಯ ಹೇಳಿದ್ದು, ಆ ಸ್ಥಳವನ್ನು 15ನೇ ಸ್ಪಾಟ್ ಎಂದು ಗುರುತಿಸಲಾಗಿತ್ತು. ಅಲ್ಲಿ ಅಗೆದ ಬಳಿಕವೂ ಯಾವುದೇ ಪುರಾವೆಗಳು ಸಿಕ್ಕಿಲ್ಲ ಎನ್ನಲಾಗಿದೆ.

ಆದರೆ ತನ್ನ ಪಟ್ಟು ಬಿಡದ ಅನಾಮಧೇಯ ಸ್ಥಳೀಯರನ್ನು ವಿಚಾರಣೆಗೊಳಪಡಿಸಬೇಕು ಎಂದು ಒತ್ತಾಯಿಸಿದ್ದಾನೆ. ಆತನ ಸೂಚನೆಯ ಮೇರೆಗೆ ಸ್ಥಳೀಯ ಮಹಿಳೆಯೊಬ್ಬರನ್ನು ಎಸ್?ಐಟಿ ಅಧಿಕಾರಿಗಳು ವಿಚಾರಣೆಗೊಳಪಡಿಸಿದ್ದಾರೆ.

ಈವರೆಗಿನ ತನಿಖೆಯ ಎಲ್ಲಾ ಅಂಶಗಳನ್ನು ಕ್ರೊ?ಡೀಕರಿಸಿ ಸರ್ಕಾರಕ್ಕೆ ಎಸ್‌ಐಟಿ ಮಧ್ಯಂತರ ವರದಿ ಸಲ್ಲಿಸಬೇಕಿದೆ. ಸೋಮವಾರ ಗೃಹ ಸಚಿವರು ಮಧ್ಯಂತರ ವರದಿಯನ್ನು ಆಧರಿಸಿ ಒಂದಿಷ್ಟು ಮಾಹಿತಿಗಳನ್ನು ಸದನಕ್ಕೆ ನೀಡಬಹುದು ಎಂದು ಮೂಲಗಳು ತಿಳಿಸಿವೆ. ಈಗಾಗಲೇ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಭೈರತಿಸುರೇಶ್, ರಾಮಲಿಂಗಾರೆಡ್ಡಿ, ಎಚ್.ಕೆ. ಪಾಟೀಲ್ ಮತ್ತಿತರರು ಹೇಳಿಕೆ ನೀಡಿದ್ದು ಸೋಮವಾರ ಸದನದಲ್ಲಿ ಗೃಹ ಸಚಿವರು ನೀಡುವ ಉತ್ತರದಲ್ಲಿ ಮಹತ್ವದ ಅಂಶಗಳು ಪ್ರಕಟಗೊಳ್ಳಲಿವೆ ಎಂದಿದ್ದಾರೆ. ಹೀಗಾಗಿ ಇಡೀ ದೇಶದ ಕುತೂಹಲ ಸೋಮವಾರ ಸರ್ಕಾರ ನೀಡುವ ಹೇಳಿಕೆಯ ಮೇಲೆ ಕೇಂದ್ರಿಕೃತವಾಗಿದೆ.

ಯುವ ಮಾರ್ಗ

ಭಾನುವಾರ : 17–08–2025

## ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಆ.16–** ಇಲ್ಲಿನ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಒಳಪಡುವ ಉಪ ಜಾತಿಗಳವಾರು 2025–26ನೇ ಸಾಲಿನಲ್ಲಿ ಸಾಲ ಸೌಲಭ್ಯಕ್ಕೆ ಅರ್ಹ ಫಲಾನುವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ನಿಗಮದಿಂದ ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ, ಮೈಕ್ರೋ ಕ್ರೆಡಿಟ್ (ಪ್ರೇರಣಾ)ಯೋಜನೆ, ಭೂ ಒಡೆತನ ಯೋಜನೆ, ಗಂಗಾ ಕಲ್ಯಾಣ ಯೋಜನೆಗೆ ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ, ಪಡಿತರ ಚೀಟಿ, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕ (ಆಧಾರ ಸೀಡ್ ಆಗಿರುವ ಬ್ಯಾಂಕ್ ಖಾತೆ), ವಾಹನ ಪರವಾನಿಗಿ (ವಾಹನವಾಗಿದ್ದಲ್ಲಿ) ದರಪಟ್ಟಿ, ಪಹಾಣಿ ಉದ್ದೇಶ ಕೊಳವೆ ಬಾವಿಯಾಗಿದ್ದಲ್ಲಿ, ಸಣ ಅತೀ ಸಣ್ಣ ರೈತ ಪ್ರಮಾಣ ಪತ್ರ (ಉದ್ದೇಶ ಕೊಳವೆ ಬಾವಿಯಾಗಿದ್ದಲ್ಲಿ) ದೊಂದಿಗೆಅರ್ಜಿ ಸಲ್ಲಿಸಲು ಇಚ್ಛಿಸುವ ಫಲಾಪೇಕ್ಷಿಗಳು ಸೇವಾ ಸಿಂದು ಅಪ್ಲಿಕೇಷನ್ ಗ್ರಾಮ ಒನ್ ಅಥವಾ ಕರ್ನಾಟಕ ಒನ್ ಅಥವಾ ಬೆಂಗಳೂರು ಒನ್ ಸೆಂಟರ್‌ಗಳಲ್ಲಿ ಮಾತ್ರ ಅರ್ಜಿಯನ್ನು ನಿಗಮಗಳ ವೆಬ್‌ಸೈಟ್ ವಿಳಾಸ: https:/sevasindhu.karnataka.gov.in ನಲ್ಲಿ ಸೆಪ್ಟೆಂಬರ್ 10ರೊಳಗಾಗಿ ಸಲ್ಲಿಸಬಹುದಾಗಿದೆ.

ಸೂಚನೆ: 2023–24 ಮತ್ತು 2024–25 ನೇ ಸಾಲಿನಲ್ಲಿ ಆನ್ಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ರಾಯಚೂರು ಜಿಲ್ಲೆ ನವಯುಗ ಕಾಲೇಜು ಹತ್ತಿರ,ಡ್ಯಾಡಿಕಾಲೋನಿ ಲಿಂಗಸೂಗೂರು ರೋಡ್ ರಾಯಚೂರು–584101ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪಕಟಣೆಯಲ್ಲಿ ತಿಳಿಸಿದ್ದಾರೆ.

## ಆಗಸ್ಟ್ 20ರಂದು ಜಿಲ್ಲಾಡಳಿತದಿಂದ ಡಿ.ದೇವರಾಜ ಅರಸು ಜಯಂತಿ

**ರಾಯಚೂರು,ಆ.16–** ಇಲ್ಲಿಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಗಸ್ಟ್ 20ರ ಬೆಳಿಗ್ಗೆ 10.30 ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಶ್ರೀ ಡಿ.ದೇವರಾಜ ಅರಸು ಅವರ ಜಯಂತಿ ಹಮ್ಮಿಕೊಳ್ಳಲಾಗಿದೆ.ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು.ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ತುಳಸಿ ಮದ್ದಿನೇನಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರಾದ ಕೆ.ಎ.ದಯಾನಂದ, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರದ ಸಹ ಪ್ರಾಧ್ಯಾಪಕರಾದ ಡಾ.ಕೆ.ವೆಂಕಟೇಶ ಅವರು ಡಿ.ದೇವರಾಜ ಅರಸು ಅವರ ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡುವರು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಡಾ.ಅಶೋಕ ವಿ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನ್ವಿ: ಹುಡುಗರ 'ಶಿವತಾಂಡವ' ಕಿರು ಚಿತ್ರ ಶೀರ್ಷಕೆ ನಟ ಶರಣ್ ರಿಂದ ಬಿಡುಗಡೆ




ಯುವ ಮಾರ್ಗ ಸುದ್ದಿ

**ಮಾನ್ವಿ,ಆ.16–** ಕನ್ನಡ ಚಿತ್ರರಂಗದ ನಾಯಕ ನಟ ಶರಣ್ ಅವರು ಬೆಂಗಳೂರಿನಲ್ಲಿ ಮಾನ್ವಿ ಯುವಕರು ನಿರ್ದೇಶನ ಮಾಡಿರುವ 'ಶಿವತಾಂಡವ' ಕಿರು ಚಿತ್ರದ ಶೀರ್ಷಿಕೆಯನ್ನು ಬಿಡುಗಡೆ ಮಾಡುವ ಮೂಲಕ ಯುವಕರನ್ನು ಬೆಂಬಲಿಸಿ ಪ್ರೋತ್ಸಹಿಸಿದ್ದಾರೆ.

ನಂತರ ಮಾತನಾಡಿದ ಅವರು, ರಾಯಚೂರು ಜಿಲ್ಲೆಯ ಮಾನ್ವಿ ತಾಲೂಕಿನ ಯುವಕರ ತಂಡ ಹೊಸ ಕನಸನ್ನು ಹೊತ್ತುಕೊಂಡು ಹೊಸ ಸಿನೆಮಾಕ್ಕೆ ಕೈ ಹಾಕಿದ್ದಾರೆ. ಸ್ವಂತ ದುಡಿಮೆಯ ಹಣದಲ್ಲಿ ಕಿರುಚಿತ್ರ ನಿರ್ಮಾಣದ ತಮ್ಮ ವಿನೂತನ ಪ್ರಯತ್ನ ಮಾಡಿದ್ದಾರೆ. ಚಿತ್ರ ಶೀರ್ಷಕೆ ಬಿಡುಗಡೆ ಜವಬ್ದಾರಿ ನನಗೆ ವಹಿಸಿರುವದು ತುಂಬಾ ಸಂತೋಷಕರ ನಾನೊಬ್ಬ ಕಲಾವಿದನಾಗಿ ಅವರ ಪ್ರಯತ್ನ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದ ಅವರು, 'ಶಿವತಾಂಡವ' ಚಿತ್ರ ಶೀರ್ಷಕೆ ತಂಬಾ ಪವರ್ ಫುಲ್ ಟೈಟಲ್ ಆಗಿದೆ ಮತ್ತು ಆಕರ್ಷಕವಾಗಿದೆ ಎಂದು ಚಿತ್ರ ತಂಡದ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.ನಂತರ ಚಿತ್ರ ತಂಡದಿಂದ ನಟ ಶರಣ್ ಹಾಗೂ ರಮೇಶ್ ನಾಯಕ್ ( ಜೀ ಕನ್ನಡ ) ಅವರಿಗೆ ಕೃತಜ್ಞತೆ ತಿಳಿಸಿದರು.

ಚಿತ್ರ ತಂಡ ಚಿತ್ರದ ಕಥೆ ಮತ್ತು ನಿರ್ದೇಶನ ಅಬ್ದುಲ್ ರೋಶನ್ ಮಾನ್ವಿ,ಸಂಭಾಷಣೆ ಮತ್ತು ಸಾಹಿತ್ಯ ವಿಕ್ಟರಿ ಹಾಗೂ(ತಂಡ ) ಬಾಷಾ ಡಾಲಿ, ಇಂತಿಯಾಜ್ ಬಾಬಾ,ಯಶ್ವಂತ ಡಿ.ಕೆ.ಡಾನ್,ಡಾಲಿ ಚೇತು, ಎಸ್.ಕೆ.ಬಡಿಗೇರ್, ಶ್ರೇಯಸ್ ಉಪಸ್ಥಿತರಿದ್ದರು

## ಪ್ರಜಾಪ್ರಭುತ್ವದ ನಿಜ ಅರ್ಥದಲ್ಲಿ ಜನಕೆಲಸವೇ ಆರ್‌ಟಿಐ ಕಾಯ್ದೆಯ ಉದ್ದೇಶ: ರಾಜ್ಯ ಮಾಹಿತಿ ಆಯುಕ್ತ ರುದ್ರಣ್ಣ ಹರ್ತಿಕೋಟೆ



**ರಾಯಚೂರು,ಆ.16–** ಆರ್‌ಟಿಐ ಕಾಯ್ದೆ ಉದ್ದೇಶವೇ ನಾಗರೀಕರನ್ನು ಸಬಲೀಕರಣ ಮಾಡುವುದಾಗಿದೆ. ಸರ್ಕಾರದ ಆಡಳಿತದಲ್ಲಿ ಪಾರದರ್ಶಕತೆ ತರುವುದು ಹೊಣೆಗಾರಿಕೆಗೆ ಉತ್ತೇಜನ ನೀಡುವುದು, ಭ್ರಷ್ಟಾಚಾರಕ್ಕೆ ತಡೆ ಹಾಕುವುದು, ಪ್ರಜಾಪ್ರಭುತ್ವದ ನಿಜವಾದ ಅರ್ಥದಲ್ಲಿ ಜನರ ಕೆಲಸ ಮಾಡುವುದು ಆರ್‌ಟಿಐ ಕಾಯ್ದೆಯ ಉದ್ದೇಶವಾಗಿದೆ ಎಂದು ಪೀಠ ಸಂಖ್ಯೆ 04ರ ರಾಜ್ಯ ಮಾಹಿತಿ ಆಯುಕ್ತರಾದ ರುದ್ರಣ್ಣ ಹರ್ತಿಕೋಟೆ ಅವರು ಹೇಳಿದರು.

ಆಗಸ್ಟ್ 16ರಂದು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳಿಗೆ ನಡೆದ ತರಬೇತಿ ಕಾರ್ಯಾಗಾರದ ಬಳಿಕ ಅವರು ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದರು.

ನಮ್ಮ ದೇಶದಲ್ಲಿ ಮಾಹಿತಿ ಹಕ್ಕು ಕಾಯ್ದೆ ಬಂದು 20 ವರ್ಷಗಳಾಗಿವೆ. ಇಡೀ ಪ್ರಪಂಚದಲ್ಲಿ ಯುನೆಸ್ಕೋದ ಸದಸ್ಯ ರಾಷ್ಟ್ರಗಳಲ್ಲಿ 132 ದೇಶಗಳಲ್ಲಿ ಮಾಹಿತಿ ಹಕ್ಕು ಕಾಯ್ದೆ ಬೇರೆ ಬೇರೆ ರೂಪದಲ್ಲಿದೆ. ನಮ್ಮ ದೇಶದಲ್ಲಿ 2005ರ ಅಕ್ಟೋಬರ್ 12ಕ್ಕೆ ಮಾಹಿತಿ ಹಕ್ಕು ಅಧಿನಿಯಮ ಜಾರಿ ಬಂದಿದೆ. ರಾಜಸ್ಥಾನದ ದೇವದುಂಗ್ರಿ ಎಂಬ ಹಳ್ಳಿಯಲ್ಲಿ ನಿವೃತ್ತ ಐಎಎಸ್ ಅಧಿಕಾರಿ ಅರುಣಾರಾಯ್, ನಿಖಿಲ್ ಡೇ ಮೊದಲಾದವರು ಮಣ್ಣೂರ್ ಕಿಸಾನ್ ಶಕ್ತಿ ಸಂಘಟನೆಯ ಮೂಲಕ ನಡೆಸಿದ ಹೋರಾಟದ ಫಲವಾಗಿ ಡಾ.ಮನಮೋಹನ್ ಸಿಂಗ್ ಸರ್ಕಾರವು 2005ರಲ್ಲಿ ಈ ಕಾಯ್ದೆ ತಂದಿತು. ಆದರೆ, ಅದಕ್ಕೂ ಮುನ್ನ ಅಫಿಶಿಯಲ್ ಸಿಕ್ರೆಟ್ ಕಾಯಿದೆ ಇತ್ತು. ಅದರ ದುರುಪಯೋಗ ಹೆಚ್ಚಾಗಿತ್ತು. ಆದ್ದರಿಂದಲೇ ಆರ್‌ಟಿಐ ಕಾಯ್ದೆಗಾಗಿ ಹೋರಾಟ ನಡೆಯಿತು ಎಂದು ತಿಳಿಸಿದರು.

ಇದು ಮಾಹಿತಿಯ ಯುಗವಾಗಿದೆ. ಹೋರಾಟದ ಮೂಲಕ ದೇಶಕ್ಕೆ ಸ್ವಾತಂತ್ರ್ಯ ಬಂದಿದ್ದು, ಅಂತಹ ಹೋರಾಟದ ಮೂಲಕವೇ ಬಂದ ಈ ಮಾಹಿತಿ ಹಕ್ಕು ಕಾಯ್ದೆಯು ಸಹ ಮಾಹಿತಿಯ ಸ್ವಾತಂತ್ರ್ಯ ನೀಡುತ್ತದೆ. ಈ ಕಾಯ್ದೆ ಬರುವುದಕ್ಕೆ ಮೊದಲು ಸಾರ್ವಜನಿಕರಿಗೆ ಮಾಹಿತಿ ಸಿಗುತ್ತಿರಲಿಲ್ಲ. ಕೆಲವರಿಗೆ ಮಾತ್ರ ಲಭ್ಯವಾಗುತ್ತಿತ್ತು. ಸಾರ್ವಜನಿಕ ದಾಖಲೆಗಳನ್ನು ಮುಕ್ತವಾಗಿ ಜನರ ಮುಂದಿಡುವ ಉದ್ದೇಶದಿಂದ ಈ ಕಾಯ್ದೆ ಜಾರಿ ಬಂದಿದೆ. ಸರ್ಕಾರಗಳನ್ನು ಬುಡಮೇಲು ಮಾಡುವಂತಹ ಶಕ್ತಿ ಈ ಕಾಯಿದೆಗಿದೆ. ಈ ಕಾಯಿದೆಯ ಬಳಕೆ ಸರಿಯಾಗಿರಬೇಕು. ಸಾಮಾಜಿಕ ಸ್ವಾತಂತ್ರ್ಯ ಕಾಪಾಡುವ ನಿಟ್ಟಿನಲ್ಲಿ ಸಾರ್ವಜನಿಕರು ಮಾಹಿತಿ ಕೇಳಬೇಕು ಎಂದರು.

ಯಾವ ಉದ್ದೇಶದಿಂದ ಈ ಮಾಹಿತಿ ಹಕ್ಕು ಕಾಯ್ದೆಯನ್ನು ಜಾರಿ ತರಲಾಗಿತ್ತೋ ಅದು ಈಗ ದುರ್ಬಲಗೊಳಿಸುವ ಪ್ರಯತ್ನ ವಿವಿಧ ಮಜಲುಗಳಲ್ಲಿ ನಡೆಯುತ್ತಿದೆ. ಆದರೆ ಆ ರೀತಿಯಲ್ಲಿ ಆಗದಿರುವಂತೆ ಎಚ್ಚರಿಕೆ ವಹಿಸುವ ಜವಾಬ್ದಾರಿ ವಿವಿಧ ಇಲಾಖೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಮೇಲಿದೆ. ನಾಗರಿಕ ಸಮಾಜದ ಹೊಣೆಯೂ ಅಷ್ಟೇ ಇದೆ ಎಂದು ತಿಳಿಸಿದರು.

ಸರ್ಕಾರದ ಕಾರ್ಯವೈಖರಿಗಳನ್ನು, ಸರ್ಕಾರದಲ್ಲಿ ನಡೆಯುವ ಪ್ರತಿಯೊಂದು ಅಂಶವನ್ನು ಸಮಾಜದ ಮುಂದಿಡುವ ಬಹುದೊಡ್ಡ ಅಸ್ತ್ರ ಆರ್‌ಟಿಐ ಆಗಿದೆ. ಆದರೆ ಭ್ರಷ್ಟಾಚಾರವನ್ನು ತಡೆಯುವ ಉದ್ದೇಶದಿಂದ ತಂದ ಈ ಕಾಯ್ದೆಯನ್ನು ಬಳಸಿಕೊಂಡೆ ಕೆಲವರು ಭ್ರಷ್ಟಾಚಾರ ಮಾಡುತ್ತಿದ್ದಾರೆ ಎಂಬ ಆರೋಪಗಳಿವೆ. ಅಧಿಕಾರಿಗಳಿಗೆ ಕಿರುಕುಳ ನೀಡಲಾಗುತ್ತಿದೆ ಎಂಬ ದೂರುಗಳಿವೆ. ಕಾಯ್ದೆಯನ್ನೇ ದುರ್ಬಲಗೊಳಿಸಲಾಗುತ್ತಿದೆ ಎಂಬ ಟೀಕೆಗಳಿವೆ. ಸುಪ್ರೀಂಕೋರ್ಟ್ ಅನೇಕ ಸಂದರ್ಭದಲ್ಲಿ ಇದೇ ಮಾತನ್ನೇ ಹೇಳಿದೆ. ಅಧಿಕಾರಿಗಳು ಹಾಗೂ ಆರ್‌ಟಿಐ ಕಾರ್ಯಕರ್ತರು ಕಾಯಿದೆಯ ಉದ್ದೇಶ ಅರ್ಥ ಮಾಡಿಕೊಂಡು ಕಾರ್ಯನಿರ್ವಹಿಸಿದಾಗಲೇ ಕಾಯ್ದೆಗೆ ನಿಜವಾದ ಅರ್ಥ ಬರಲಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ಮಾಹಿತಿ ಹಕ್ಕು ಅಧಿನಿಯಮದಡಿಯಲ್ಲಿ ಅರ್ಜಿ ಸಲ್ಲಿಸುವವರ ಸಂಖ್ಯೆ ದಿನೇ ದಿನೇ ಹೆಚ್ಚಾಗುತ್ತಿದೆ. ಅದಕ್ಕೆ ಯಾವುದೇ ಕಾರಣಗಳಿರಬಹುದು. ಆದರೆ ಅದೊಂದು ಒಳ್ಳೆಯ ಬೆಳವಣಿಗೆ. ಪಿಐಒಗಳು ಯಾವುದೇ ಒತ್ತಡಕ್ಕೆ ಅಥವಾ ಹೆದರಿಕೆಗೆ ಒಳಗಾಗದೇ ಮಾಹಿತಿ ನೀಡಿದರೆ ಕಾಯ್ದೆಯ ಉದ್ದೇಶ ಸಫಲವಾಗುತ್ತದೆ. ಅರ್ಜಿದಾರ ಪ್ರಥಮ ಹಾಗೂ ದ್ವಿತೀಯ ಮೇಲ್ಮನವಿ ಹೋಗುವುದು ತಪ್ಪುತ್ತದೆ. ಮಾಹಿತಿ ನೀಡದಿದ್ದಲ್ಲಿ ದಂಡ, ಅರ್ಜಿದಾರರಿಗೆ ಪರಿಹಾರಕ್ಕೆ ಶಿಫಾರಸು ಮಾಡಲಾಗುತ್ತದೆ. ಪಿಐಒಗಳ ಸಂಬಳದಲ್ಲಿಯೇ ಕಡಿತ ಮಾಡಲಾಗುತ್ತದೆ ಎಂದರು.

ಮೂರನೇ ವ್ಯಕ್ತಿಯ ಮಾಹಿತಿಯನ್ನು ಕೋರಿದ ಸಂದರ್ಭದಲ್ಲಿ ವೈವಾಹಿಕ ವಿವರ, ಸೇವಾ ವಿವರ. ವೈಯಕ್ತಿಕ ಮಾಹಿತಿಯನ್ನು ನೀಡುವುದರಲ್ಲಿ ಕೆಲವೊಂದು ನಿರ್ಬಂಧಗಳಿವೆ. ಸೇವಾ ರಹಸ್ಯಗಳ ಬಗ್ಗೆ ಕೇಳಿದಾಗ ಬಾಧ್ಯಸ್ಥರ ಒಪ್ಪಿಗೆ ಪಡೆಯಬೇಕಾಗುತ್ತದೆ. ಗೌರವಾನ್ವಿತ ನ್ಯಾಯಾಲಯಗಳು, ಕೇಂದ್ರ ಮಾಹಿತಿ ಆಯೋಗ, ವಿವಿಧ ರಾಜ್ಯಗಳ ಮಾಹಿತಿ ಆಯೋಗಗಳ ತೀರ್ಪುಗಳನ್ನು ಗಮನಿಸಬೇಕು. ಪಿಐಒಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಗಳು ಇವುಗಳ ಬಗ್ಗೆ ಅಧ್ಯಯನ ಮಾಡಿಕೊಂಡರೆ ಅರ್ಜಿಗಳ ವಿಲೇವಾರಿಯಲ್ಲಿ ವೇಗ ನೀಡಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಎರಡು ದಶಕಗಳ ಅವಧಿಯಲ್ಲಿ ಕಾಯ್ದೆ ಸಾಕಷ್ಟು ಬದಲಾವಣೆಗಳನ್ನು ತಂದಿದೆ. ನಾಗರೀಕರಿಗೆ ಸರ್ಕಾರದ ನಡವಳಿಕೆ ತಿಳಿಯುತ್ತಿದೆ. ಅಧಿಕಾರಿಗಳು ಹೊಣೆಗಾರರನ್ನಾಗಿ ಮಾಡಿದೆ. ನಾವು ವೇಗವಾಗಿ ಅರ್ಜಿಗಳ ವಿಚಾರಣೆ ಹಾಗೂ ವಿಲೇವಾರಿ ಮಾಡಿದರೂ ಸಹ ಇನ್ನೂ ಸಾಕಷ್ಟು ಅರ್ಜಿಗಳ ವಿಚಾರಣೆ ಬಾಕಿ ಇದೆ. ಸಾಕಷ್ಟು ಅಧಿಕಾರಿಗಳಲ್ಲಿ ಕಾಯ್ದೆಯ ಬಗ್ಗೆ ಅರಿವು ಕಡಿಮೆ ಇದೆ. ನಿಯಮಾವಳಿ ಪುಸ್ತಕವನ್ನು ಅಧ್ಯಯನ ಮಾಡುವುದು ಅಗತ್ಯವಾಗಿದೆ. ಅಧ್ಯಯನ ಮಾಡುವ ಮೂಲಕ ಪಾರದರ್ಶಕ ಹಾಗೂ ಹೊಣೆಗಾರಿಕೆಯ ಮತ್ತು ಭ್ರಷ್ಟಾಚಾರ ಮುಕ್ತ ಆಡಳಿತಕ್ಕೆ ಕೈ ಜೋಡಿಸಬೇಕು ಎಂದು ಕಾರ್ಯಗಾರದಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳಿಗೆ ಮನವರಿಕೆ ಮಾಡಿದ್ದೇವೆ ಎಂದು ತಿಳಿಸಿದರು.

ಮಾಹಿತಿ ಹಕ್ಕು ಅರ್ಜಿಗಳಿಗೆ ಮಾಹಿತಿ ಒದಗಿಸಲು ವಿಳಂಬ ಮಾಡಿದಕ್ಕೆ ನೌಕರರ ಮೇಲೆ ದಂಡ ವಿಧಿಸುವುದಲ್ಲದೇ, ಆಯೋಗವು ಕೆಲವು ಮಾಹಿತಿ ಹಕ್ಕು ಅರ್ಜಿದಾರರನ್ನು ಬ್ಲಾಕ್ ಲೀಸ್ಟ್ನೆ ಸೇರಿಸಿದೆ. ನಮ್ಮ ರಾಜ್ಯದಲ್ಲಷ್ಟೇ ಅಲ್ಲ, ಬೇರೆ ಬೇರೆ ರಾಜ್ಯದಲ್ಲೂ ಸಹ ಕೆಲವು ಮಾಹಿತಿ ಹಕ್ಕು ಅರ್ಜಿದಾರರನ್ನು ಬ್ಲಾಕ್‌ಲಿಸ್ಟ್ನೆ ಸೇರಿಸಿದ ಉದಾಹರಣೆಗಳಿವೆ ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಪೀಠ ಸಂಖ್ಯೆ 05ರ ರಾಜ್ಯ ಮಾಹಿತಿ ಆಯುಕ್ತರಾದ ರಾಜಶೇಖರ ಎಸ್, ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ಇದ್ದರು.

# ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಸ್ವಾತಂತ್ರ್ಯೋತ್ಸವ

ಯುವ ಮಾರ್ಗ ಸುದ್ದಿ

**'ರಾಯಚೂರು,ಆ.16–**ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಕಚೇರಿ ಆವರಣದಲ್ಲಿ ಆಗಸ್ಟ್ 15ರಂದು 79ನೇ ಸ್ವಾತಂತ್ರ್ಯ ದಿನಾಚರಣೆ ನಡೆಯಿತು.

ಸಂಘದ ಜಿಲ್ಲಾಧ್ಯಕ್ಷ ಶ್ರೀ ಕೃಷ್ಣ ಶಾವಂತಗೇರಿ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.



## ಸ್ವತಂತ್ರ ದಿನಾಚರಣೆ ಅಂಗವಾಗಿ ನೋಟ್ ಬುಕ್ ವಿತರಣೆ : ಭೀಮಣ್ಣ ಸೋಮಕಾರ್



ಯುವ ಮಾರ್ಗ ಸುದ್ದಿ

**ದೇವದುರ್ಗ,ಆ.16–** ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಸೋಮಕಾರದೊಡ್ಡಿ ಶಾಲೆಯಲ್ಲಿ 79ನೇ ಸ್ವತಂತ್ರ ದಿನಾಚರಣೆ ಸರಳ ರೂಪದಲ್ಲಿಆಚರಣೆಯನ್ನು ಮಾಡಲಾಯಿತು, ಧ್ವಜಾರೋಹಣ ವನ್ನು ಶಾಲೆಯ ಎಸ್ ಡಿ ಎಂ ಸಿ ಅಧ್ಯಕ್ಷ ನಾಗರಾಜ ಸೋಮಕಾರ ನೆರವೇರಿಸಿದರು

ಈ ಸಂದರ್ಭದಲ್ಲಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುವ ಎಲ್ಲ ಮಕ್ಕಳಿಗೆ ಉಚಿತವಾಗಿ ಶಿಕ್ಷಣ ಪ್ರೇಮಿ ಭೀಮಣ್ಣ ಸೋಮಕಾರ್ ಅವರು ನೋಟ್ ಬುಕ್ ವಿತರಣೆ ಮಾಡಿದರು ಈ ಸಂದರ್ಭದಲ್ಲಿ ಮುಖಂಡರಾದ ವೆಂಕಟೇಶ್ ಸೋಮಕಾರ, ಗುಂಡಪ್ಪ ನಾಯಕ,ರಾಘವೇಂದ್ರ ಸೋಂಕಾರ್ ಹಾಗೂ ಮುಖ್ಯ ಶಿಕ್ಷಕಿ ರೇಣುಕಾ,ಸಾ ಶಿಕ್ಷಕಿ ಎಸ್ ಬಿ ಕೋಲಾರ್ ಹಾಗೂ ಶಾಲೆಯ ಸಿಬ್ಬಂದಿ

## ತಾಲೂಕಿನ ಕೃಷಿ ಅಧಿಕಾರಿ ಯಂಕಣ್ಣ ಯಾದವ್ ರವರಿಗೆ ಜಿಲ್ಲಾ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರಧಾನ



ಯುವ ಮಾರ್ಗ ಸುದ್ದಿ

**ಮಾನ್ವಿ,ಆ.16–** ರಾಯಚೂರು ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಆ.15 ರಂದು ಜಿಲ್ಲಾಡಳಿತವತಿಯಿಂದ ನಡೆದ 2025 ನೇ ಸಾಲಿನ ಸ್ವಾತಂತ್ರಂತ್ರೋತ್ಸವ ದಿನಾಚರಣೆ ಸಮಾರಂಭದಲ್ಲಿ ತಾಲೂಕಿನ ಕೃಷಿ ಇಲಾಖೆಯಲ್ಲಿ ಉತ್ತಮ ಸೇವೆ ಸಲ್ಲಿಸಿದಕ್ಕಾಗಿ ಕೃಷಿ ಅಧಿಕಾರಿ ಯಂಕಣ್ಣ ಯಾದವ್ ರವರಿಗೆ ಜಿಲ್ಲಾಡಳಿತವತಿಯಿಂದ ಜಿಲ್ಲಾ ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು ಜಿಲ್ಲಾ ಉಸ್ತುವಾರಿಸಚಿವರಾದ ಡಾ.ಶರಣಪ್ರಕಾಶ ಪಾಟೀಲ್ ರವರು ನೀಡಿ ಗೌರವಿಸಿದರು

# ಪಾರ್ವತಿ ನಗರದ ನಿವಾಸಿ ಜಮಶೇರ್ ಅಲಿ ಕಾಣೆ: ಪತ್ತೆಗೆ ಶಕ್ತಿನಗರ ಪೊಲೀಸರ ಮನವಿ



**ರಾಯಚೂರು,ಆ.16–** ಶಕ್ತಿನಗರ ಪೊಲೀಸ್ ಠಾಣೆಯ ವ್ಯಾಪ್ತಿಯ ಪಾರ್ವತಿ ನಗರದ ನಿವಾಸಿಯಾದ ಜಮಶೇರ್ ಅಲಿ ತಂದೆ ಅಕ್ಬರ್ ಸಾಬ್ (35) ಎಂಬ ಯುವ ಯುವಕ 2025ರ ಜೂನ್ 20ರ ರಾತ್ರಿ 9ಗಂಟೆ ಸುಮಾರಿಗೆ ಮನೆಗೆ ನೀರು ತರುವುದಾಗಿ ಹಾಗೂ ಕೆಪಿಸಿ ಕಾಲೋನಿಯಲ್ಲಿರುವ ತನ್ನ ತಾಯಿಯನ್ನು ಮಾತನಾಡಿಸಿಕೊಂಡು ಬರುವುದಾಗಿ ತಿಳಿಸಿ ಮನೆಯಿಂದ ಹೋದವನ್ನು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಠಾಣೆಯಲ್ಲಿ ಗುನ್ನೆ ನಂ; 38/2025 ಕಲಂ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ಚಹರೆ ಪಟ್ಟಿ: ಎತ್ತರ 5–8 ಫೀಟ್ ಎತ್ತರ, ವಯಸ್ಸು 35, ಆರ್.ಟಿ.ಪಿ.ಎಸ್ ನಲ್ಲಿ ಟೆಕ್ನಿಷಿಯನ್‌ಯಾಗಿ ಕೆಲಸ ಮಾಡುತ್ತಿದ್ದು, ಗೋದಿ ಬಣ್ಣ ಮೈಬಣ್ಣ, ಕೋಲು ಮುಖ, ಕೆಂಪು ಬಣ್ಣದ ಟೀ ಶರ್ಟ, ಕಪ್ಪು ಬಣ್ಣದ ಪ್ಯಾಂಟ್ ಉಡುಪು ಧರಿಸಲಾಗಿದೆ. ಹಿಂದಿ, ಕನ್ನಡ ಹಾಗೂ ತೆಲುಗು ಭಾಷೆ ಮಾತನಾಡುತ್ತಾನೆ.

ಈ ಚಹರೆಯುಳ್ಳ ಕಾಣೆಯಾದ ವ್ಯಕ್ತಿಯ ಬಗ್ಗೆ ಸಿಕ್ಕಲ್ಲಿ / ಕಂಡು ಬಂದಲ್ಲಿ ಪಿ.ಎಸ್.ಐ ಶಕ್ತಿನಗರ ಪೊಲೀಸ್ ಠಾಣೆ 9480803868, ಸಿಪಿಐ ಗ್ರಾಮೀಣ ವೃತ್ತ ರಾಯಚೂರು 9480803832, ಡಿಎಸ್ಪಿ ರಾಯಚೂರು 9480803820, ರಾಯಚೂರು ಕಂಟ್ರೋಲ್ ರೂಮ್ 08532–235635ಗೆ ಸಂಪರ್ಕ ಮಾಡುಬಹುದಾಗಿದೆ ಎಂದು ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H